ಸಂಪುಟ : 10 ಸಂಚಿಕೆ: 95 ಪುಟ : 4+2 ಬೆಲೆ: 3.00 ಗುರುವಾರ ಮೇ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 10 Issue : 95 Pages : 4+2 Price : 3.00 Thursday May 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ-15 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 24, 26 – ಮಕಾನಗಲ್ಲಿ, ಉಡಚಮ್ಮನ ಗುಡಿ, ತೆಗ್ಗಿನ ಪೇಟೆ, ಅಬ್ಬಿಗೇರಿ ಕಂಪೌಂಡ್, ಸಾಲಮನೆ, ಕಮ್ಮಾರ ಸಾಲ, ಉರ್ದು ಶಾಲೆ, ಹಿಂದಿನ ಭಾಗ, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 12, 13, 14, 28, ಮಾಲಿಪಾಟೀಲ, ಗೋಜನೂರ ಅವರ ಮನೆ, ಲಕ್ಷ್ಮೀಗುಡಿ, ಕುಷ್ಠರೋಗ ಕಾಲೊನಿ, ಶಿವನಗುತ್ತಿಯವರ ಲೈನ್, ಡಾ॥ ಪಾಟೀಲ್ ಅವರ ಲೈನ್, ಜೆ.ಟಿ.ಕಾಲೇಜ್ ರಸ್ತೆ, ಗೋಟೂರ ಅವರ ಲೈನ್, ದ್ಯಾವನಗೌಡ್ರ ಲೈನ್, ಗುಳೇದಾರ ಲೈನ್, ಮುಧೋಳ ಅವರ ಲೈನ್, ಟ್ಯಾಗೋರ ರಸ್ತೆ, ಕೆಲವು ಉಳಿದ ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದು ನಡೆಯಲಿರುವ ತುರ್ತು ಪರಿಸ್ಥಿತಿ ನಿರ್ವಹಣೆಯ ಅಣುಕು ಪ್ರದರ್ಶನ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಮಾಕ್ ಡ್ರಿಲ್‌ನಿಂದ ಸಾರ್ವಜನಿಕ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಮತ್ತು ಪಾಕಿಸ್ತಾನ ದೇಶಗಳ ನಡುವೆ ಪ್ರಕ್ಷುಬ್ಧ ವಾತಾವರಣವಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಗೃಹ ಇಲಾಖೆಯ ಆದೇಶದಂತೆ ಅಭ್ಯಾಸ ಕೈಗೊಳ್ಳಲಾಗುತ್ತಿದ್ದು, ಮಾಕ್ ಡ್ರಿಲ್ (ಅಣುಕು ಪ್ರದರ್ಶನ)ನ್ನು ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದೊಂದಿಗೆ ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜರುಗಿದ ಮಾಕ್ ಡ್ರಿಲ್ (ಅಣುಕು ಪ್ರದರ್ಶನ) ಏರ್ಪಡಿಸುವ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾಕ್ ಡ್ರಿಲ್ (ಅಣುಕು ಪ್ರದರ್ಶನ)ವನ್ನು ಮೇ 15ರಂದು ಸಂಜೆ 4 ಗಂಟೆಯಿಂದ 7 ಗಂಟೆಯವರೆಗೆ ಗದಗ ನಗರದಲ್ಲಿ ಆಯೋಜಿಸಲಾಗುತ್ತಿದೆ. ಈ ಅಣುಕು ಪ್ರದರ್ಶನದಲ್ಲಿ ನಾಗರಿಕ ಸೇವಾ ಇಲಾಖೆಗಳು ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯದಿಂದ ತುರ್ತು ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸುವ ಬಗ್ಗೆ ಪ್ರಾತ್ಯಕ್ಷಿಕೆ ನಿರ್ವಹಿಸಲಾಗುವುದು. ಸಂಬಂಧಿಸಿದ ಇಲಾಖೆಗಳು ತಮಗೆ ವಹಿಸಿದ ಕರ್ತವ್ಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕೆಂದು ತಿಳಿಸಿದರು.



> ನಾಗರಿಕ ಸೇವಾ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳಿಗೆ ಹಾಗೂ ಎನ್‌ಎಸ್‌ಎಸ್, ಎನ್‌ಸಿಸಿ, ರೆಡ್ ಕ್ರಾಸ್, ಮಾಜಿ ಸೈನಿಕರ ತಂಡ, ಸ್ವಯಂ ಸೇವಕರು ಒಟ್ಟಾಗಿ ಅಣುಕು ಪ್ರದರ್ಶನದಲ್ಲಿ ಪಾಲ್ಗೊಂಡು ಜಾಗೃತಿ ಮೂಡಿಸಲು ಮುಂದಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದರು.

ಈ ಅಣುಕು ಪ್ರದರ್ಶನದಿಂದ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದರೊಂದಿಗೆ ಸಂದಿಗ್ಧ ಪರಿಸ್ಥಿತಿಯಲ್ಲಿ ಕರ್ತವ್ಯ ನಿರ್ವಹಣೆ ಬಗ್ಗೆ ಇಲಾಖಾ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದಂತಾಗುತ್ತದೆ. ಮುಂಜಾಗ್ರತಾ ಕ್ರಮವಾಗಿ ಈ ಅಣುಕು ಪ್ರದರ್ಶನ ಮಾಡುವ ಮೂಲಕ ಪೂರ್ವಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಮಾಕ್ ಡ್ರಿಲ್‌ನ್ನು ಮೇ 15ರಂದು ಸಂಜೆ 4 ಗಂಟೆಯಿಂದ 7 ಗಂಟೆಯವರೆಗೆ ಗದಗ ನಗರದಲ್ಲಿ ಆಯೋಜಿಸಲಾಗುತ್ತಿದೆ. ಮಾಕ್ ಡ್ರಿಲ್ ಮೂಲಕ ವಿವಿಧ ಇಲಾಖೆಗಳು ತಮ್ಮ ಕರ್ತವ್ಯಗಳನ್ನು ನಿಗದಿತ ಸಮಯದಲ್ಲಿ ನಿರ್ವಹಿಸುವ ಬಗ್ಗೆ ಖಚಿತಪಡಿಸಿಕೊಳ್ಳಲಾಗುವುದು ಹಾಗೂ ಅಣುಕು ಪ್ರದರ್ಶನದಲ್ಲಿ ಪರಿಸ್ಥಿತಿ ನಿರ್ವಹಣೆಯಲ್ಲಿ ಆಗುವ ತೊಂದರೆಗಳು ಹಾಗೂ ಲೋಪದೋಷಗಳನ್ನು ಗುರುತಿಸಿ ಸರಿಪಡಿಸಲು ಅವಕಾಶ ದೊರೆತಂತಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಬಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಡಿವೈಎಸ್‌ಪಿ ವಿದ್ಯಾನಂದ ನಾಯಕ್, ನಗರಸಭೆ ಪೌರಾಯುಕ್ತ ರಾಜಾರಾಂ ಪವಾರ, ಡಿಎಚ್‌ಓ ಡಾ. ಎಸ್.ಎಸ್. ನೀಲಗುಂದ, ಡಿಡಿಎಲ್‌ಆರ್ ರುದ್ರಣ್ಣ ಗೌಡ ಜಿ.ಜೆ ಸೇರಿದಂತೆ ಎಲ್ಲ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್.ಕೆ ಸಮಾಜದ ಗದಗ ಜಿಲ್ಲೆಯ ವಿದ್ಯಾರ್ಥಿಗಳಿಗೆ ಬೆಟಗೇರಿ ಎಸ್.ಎಸ್.ಕೆ. ಸಮಾಜದ ಆಶ್ರಯದಲ್ಲಿ ಡಾ. ಎನ್.ವ್ಹಿ. ಬದಿ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಿದ್ದು, ಗದಗ ಜಿಲ್ಲೆಯ ಎಸ್.ಎಸ್.ಕೆ ಸಮಾಜದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯಲು ತಿಳಿಸಲಾಗಿದೆ.

2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ (ದ್ವಿತೀಯ ವರ್ಷ) (ಆರ್ಟ್ಸ್, ಸೈನ್ಸ್, ಮತ್ತು ಕಾಮರ್ಸ್)ನಲ್ಲಿ ಶೇ.90 ಮೇಲ್ಪಟ್ಟು ಅಂಕ ಪಡೆದವರು ಅರ್ಜಿ ಸಲ್ಲಿಸಬೇಕು. ಅತ್ಯಧಿಕ ಅಂಕಗಳನ್ನು ಪಡೆದವರ ಅರ್ಜಿಗಳನ್ನು ಪ್ರತಿಭಾ ಪುರಸ್ಕಾರಕ್ಕೆ ಪರಿಗಣಿಸಲಾಗುವದು. ಬಿ.ಇ, ಎಮ್.ಬಿ.ಬಿ.ಎಸ್ ಹಾಗೂ ಸಿ.ಎ ಪ್ರಥಮ ವರ್ಷದಲ್ಲಿ ಅತೀ ಹೆಚ್ಚು ಅಂಕ ಪಡೆದವರಿಗೂ ನಗದು ರೂಪದಲ್ಲಿ ಪುರಸ್ಕಾರವನ್ನು ನೀಡಲಾಗುವದು.

ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿ (ಝರಾಕ್ಸ), ಭಾವಚಿತ್ರ ಹಾಗೂ ಮೊಬೈಲ್ ಸಂಖ್ಯೆಯೊಂದಿಗೆ 8–06–2025ರ ಒಳಗಾಗಿ ಅರ್ಜಿಗಳನ್ನು ಶ್ರೀ ಅಂಬಾಭವಾನಿ ದೇವಸ್ಥಾನ ಬೆಟಗೇರಿಯ ಸಮಾಜದ ಕಾರ್ಯಾಲಯದಲ್ಲಿ ಸಲ್ಲಿಸಲು ಬೆಟಗೇರಿ ಎಸ್.ಎಸ್.ಕೆ ಸಮಾಜದ ಅಧ್ಯಕ್ಷರಾದ ಲೋಕನಾಥ ಕಬಾಡಿ ವಿನಂತಿಸಿದ್ದಾರೆ.

### ಕೃಷಿ ವಿಶ್ವವಿದ್ಯಾಲಯದ 38ನೇ ಘಟಿಕೋತ್ಸವ ಸಮಾರಂಭದಲ್ಲಿ ಡಾ. ಚಿ. ಶ್ರೀನಿವಾಸ ರಾವ್

# ಗ್ರಾಮೀಣ ಜೀವನ ಮಟ್ಟ ಸುಧಾರಿಸಬೇಕು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿ ಶಿಕ್ಷಣವನ್ನು ತರಗತಿ ಕೋಣೆಯ ಹೊರಗೆ ನೀಡಬೇಕು. ಕೃಷಿ ವಿದ್ಯಾರ್ಥಿಗಳು, ಸಿಬ್ಬಂದಿಗಳು ರೈತರ ಬೇಡಿಕೆ ಮತ್ತು ಸವಾಲುಗಳನ್ನು ತಿಳಿದು, ಅವರೊಂದಿಗೆ ಬೆರೆತು ಗ್ರಾಮೀಣರ ಜೀವನಮಟ್ಟ ಸುಧಾರಣೆಗೆ ಕೆಲಸ ಮಾಡಬೇಕು ಎಂದು ನವದೆಹಲಿ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ನಿರ್ದೇಶಕ ಹಾಗೂ ಕುಲಪತಿಗಳಾದ ಡಾ. ಚಿ. ಶ್ರೀನಿವಾಸ ರಾವ್ ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಜರುಗಿದ ವಿಶ್ವವಿದ್ಯಾಲಯ 38ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಕರ್ನಾಟಕ ಕೃಷಿ ಕ್ಷೇತ್ರಕ್ಕೆ ಹವಾಮಾನ ವೈಪರಿತ್ಯ, ತಂತ್ರಜ್ಞಾನ ಮತ್ತು ನೀತಿಗಳು ಸವಾಲುಗಳಾಗಿವೆ. ಕರ್ನಾಟಕ ರಾಜ್ಯವು ಸರಿ ಸುಮಾರು 128 ಲಕ್ಷ ಹೆಕ್ಟೆರ್ ಕೃಷಿ ಭೂಮಿ ಹೊಂದಿದೆ. ಇದರಲ್ಲಿ ಸುಮಾರು 40 ಲಕ್ಷ ಹೆಕ್ಟೆರ್ ಭೂಮಿ ನೀರಾವರಿ, ಬಹು ಬೆಳೆ ಬೆಳೆಯುವ ಸುಮಾರು 21 ಲಕ್ಷ ಹೆಕ್ಟೆರ್ ಭೂಮಿ ಮುಖ್ಯವಾಗಿದೆ.

ಕರ್ನಾಟಕ ಸರಕಾರವು 2025–26ನೇ ಸಾಲಿನಲ್ಲಿ ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವ ನೀಡಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದಾಗ ಕೃಷಿ ಬೆಳವಣಿಗೆ ಕರ್ನಾಟಕದಲ್ಲಿ ಹೆಚ್ಚಾಗಿದೆ.ಭಾರತದ ಕೃಷಿ ಹಸಿರುಕ್ರಾಂತಿ, ಶ್ವೇತಕ್ರಾಂತಿ ಮತ್ತು ಮತ್ಸಕ್ರಾಂತಿಗಳನ್ನು ಅತ್ಯಂತ ಯಶಸ್ವಿಯಾಗಿ ಮಾಡಿದೆ. ಈ ಕ್ರಾಂತಿಗಳಿಂದಾಗಿ ಆರ್ಥಿಕ, ಸಾಮಾಜಿಕ, ಔದ್ಯೋಗಿಕ ಮತ್ತು ಸಾಮಾಜಿಕ ಬದಲಾವಣೆಗಳಾಗಿವೆ ಎಂದು ಅವರು ತಿಳಿಸಿದರು.




ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಾಧಿಪತಿಗಳೂ ಆಗಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮಾತನಾಡಿ, ಹವಾಮಾನದ ಬದಲಾವಣೆಯಿಂದ ಕೃಷಿ ಕ್ಷೇತ್ರದಲ್ಲಿ ಸಾಕಷ್ಟು ಹಿನ್ನಡೆ, ಹಾನಿ ಆಗುತ್ತಿದೆ. ಕೃಷಿ ಪದವಿಧರರು ಹೆಚ್ಚಿನ ಸಂಶೋಧನೆ ಹಾಗೂ ವಿನೂತನ ಪ್ರಯೋಗಗಳನ್ನು ಮಾಡುವ ಮೂಲಕ ಕೃಷಿ ಕಾರ್ಯಕ್ಕೆ ಬಲ ತುಂಬಬೇಕು ಎಂದು ತಿಳಿಸಿದರು.

> ಸಮಾರಂಭದಲ್ಲಿ ಕೃಷಿ ಕ್ಷೇತ್ರದ ಸಾಧಕರಾದ ಮುತ್ತಣ್ಣ ಭೀರಪ್ಪ ಪೂಜಾರ, ದ್ಯಾಮನಗೌಡ ತಿಮ್ಮನಗೌಡ ಪಾಟೀಲ ಮತ್ತು ಶಂಕರ ಹನಮಂತ ಲಂಗಟಿ ಅವರಿಗೆ ರಾಜ್ಯಪಾಲರು ಗೌರವ ಡಾಕ್ಟ-ರೇಟ್ ಪ್ರದಾನ ಮಾಡಿ ಗೌರವಿಸಿದರು. ಕೃಷಿ ಪದವಿ ವಿದ್ಯಾರ್ಥಿಗಳಾದ ಕಾರ್ತಿಕ ಚಿಗರಿ ಹಾಗೂ ಐಶ್ವರ್ಯ ಬೆಟಗೇರಿ ಹೆಚ್ಚು ಚಿನ್ನದ ಪದಕಗಳೊಂದಿಗೆ ಪ್ರಸಕ್ತ ಸಾಲಿಗೆ ಕೃಷಿ ವಿಶ್ವವಿದ್ಯಾಲಯದ ಚಿನ್ನದ ಹುಡುಗ ಮತ್ತು ಚಿನ್ನದ ಹುಡಗಿ ಬಿರುದಿಗೆ ಭಾಜನರಾದರು.

ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ದೇಶದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯ ಅತ್ಯುತ್ತಮ ಸಂಸ್ಥೆಯಾಗಿದೆ. ರೈತರ ಅವಶ್ಯಕತೆಗಳಿಗೆ ಅನುಗುಣವಾಗಿ ಸಂಶೋಧನೆ, ಕೃಷಿ ತಂತ್ರಜ್ಞಾನದ ವರ್ಗಾವಣೆ, ಹೊಸ ತಳಿಗಳ ಪರಿಚಯಿಸುವಲ್ಲಿ ಈ ವಿಶ್ವವಿದ್ಯಾಲಯದ ಪಾತ್ರ ಮತ್ತು ಕೊಡುಗೆ ಅಪಾರ ಎಂದು ತಿಳಿಸಿದರು.

## ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಹ್ಯಾಕಥಾನ್



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ ಡಿಜೈನ್ ವಿಭಾಗದ ಸಹಯೋಗದಲ್ಲಿ ಎರಡು ದಿನದ ಹ್ಯಾಕಥಾನ್–2025 ಕಾರ್ಯಕ್ರಮ ಜರುಗಿತು.

ರಾಜ್ಯದ ವಿವಿಧ ತಾಂತ್ರಿಕ ಮಹಾ ವಿದ್ಯಾಲಯಗಳಿಂದ ಸುಮಾರು 86 ತಂಡಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದವು. ಕಾರ್ಯಕ್ರಮವನ್ನು ಬೆಂಗಳೂರಿನ ಶೆಲ್ ಕಂಪನಿಯ ನುರಿತ ಇಂಜಿನಿಯರ್ ಆದಿತ್ಯ ನರೇಂದ್ರ ಉದ್ಘಾಟಿಸಿ ಮಾತನಾಡಿ, ಡೇಟಾ ಸೈನ್ಸ್, ಆರ್ಟಿಫಿಶಿಯಲ್ ಇಂಟಲಿಜೆನ್ಸಿ, ಮಷಿನ್ ಲರ್ನಿಂಗ್ ಮತ್ತು ಸ್ಟ್ಯಾಟಿಸ್ಟಿಕ್ ಕಮೆಂಡಿಂಗ್ ಕ್ಷೇತ್ರಗಳಲ್ಲಿ ಪರಿಣಿತಿಯನ್ನು ಹೊಂದಬೇಕೆಂದು ಸಲಹೆ ನೀಡಿದರು. ಅತಿಥಿಗಳಾಗಿ ಆಗಮಿಸಿದ್ದ ಪ್ರೊ. ಚಂದ್ರಶೇಖರ ಕುರಿ, ಪ್ರೊ. ಪದ್ಮನಾಭ ಬಿ, ಕೌಶಲ್ಯ ಅಭಿವೃದ್ಧಿ ಘಟಕ ಸಂಯೋಜಕರಾದ ಪ್ರೊ. ಪ್ರಸನ್ನ ನಾಡಗೌಡರ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಪಪ್ರಾಂಶುಪಾಲ ಡಾ. ಜಿ.ಡಿ. ರೇವಣಕರ್ ವಹಿಸಿದ್ದರು. ಎರಡೂ ವಿಭಾಗಗಳ ಮುಖ್ಯಸ್ಥರಾದ ಡಾ. ರಮೇಶ ಬಡಿಗೇರ ಮತ್ತು ಪ್ರೊ. ವಿಜಯಕುಮಾರ ಎಸ್.ಎಮ್, ಸಿಬ್ಬಂದಿ ಸಂಯೋಜಕರಾದ ಪ್ರೊ. ಅಧೋಕ್ಷಜ ಕುಲಕರ್ಣಿ, ಪ್ರೊ. ನಾಗರಾಜ ತೇಲಕರ್ ಮತ್ತು ಪ್ರೇಮಾ ಯಲ್ಲೂರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವಿದ್ಯಾರ್ಥಿ ಪ್ರತಿನಿಧಿಗಳಾದ ಜಯದೀಪ, ಋತಿಕಾ ಮತ್ತ ಸಹನಾ ಕಾರ್ಯಕ್ರಮ ಆಯೋಜಿಸಿದ್ದರು.

### ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣ ಸೇರಿದಂತೆ ಸವಡಿ ಗ್ರಾಮದಲ್ಲಿಯೂ ಕೂಡ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು, ಸುಮಾರು 56 ಕೋಟಿ 37 ಲಕ್ಷ ರೂಗಳನ್ನು ಅಭಿವೃದ್ಧಿ ಕಾರ್ಯಗಳಿಗೆ ವಿನಯೋಗಿಸಲಾಗಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ರೋಣ ಪಟ್ಟಣ ಸೇರಿದಂತೆ ಸವಡಿ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ರೋಣ ಪಟ್ಟಣದಲ್ಲಿ ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡುವ ಜೆಟಿಟಿಸಿ ಮಹಾವಿದ್ಯಾಲಯ ಕಟ್ಟಡ ನಿರ್ಮಾಣಕ್ಕೆ 50 ಕೋಟಿ ರೂಗಳು ಬಿಡುಗಡೆಗೊಂಡಿದ್ದು, ಕಟ್ಟಡ ಶೀಘ್ರವೇ ನಿರ್ಮಾಣವಾಗಿ ಇದೇ ವರ್ಷ ಅಕ್ಟೋಬರ್ ತಿಂಗಳಲ್ಲಿ ಪ್ರವೇಶಾತಿ ಕಾರ್ಯವೂ ಕೂಡ ಜರುಗಲಿದೆ ಎಂದ ಅವರು, 1 ಕೋಟಿ 90 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಇಂದಿರಾ ಕ್ಯಾಂಟಿನ್ ಉದ್ಘಾಟನೆಗೊಂಡಿದ್ದು, ಬಡವರಿಗೆ, ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ ಅಲ್ಪ ದರದಲ್ಲಿ ರುಚಿಯಾದ ಆಹಾರವನ್ನು ಉಣ ಬಡಿಸಲಿದೆ. ನಾಗರಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.



> ರೋಣ ತಾಲೂಕಿನಲ್ಲಿ 10 ಸಾವಿರ ಕಾರ್ಮಿಕರಿದ್ದು, ಕಾರ್ಮಿಕ ಆರೋಗ್ಯ ವಾಹನದಿಂದ ಸುಮಾರ 20ರಿಂದ 25 ಸಾವಿರ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಯಲಿದೆ. ಕಾರ್ಮಿಕರ ಹಿತವನ್ನು ಬಯಸಿ ಸರಕಾರ ಸಂಚಾರಿ ವಾಹನವನ್ನು ರೋಣ, ಗಜೇಂದ್ರಗಡ ತಾಲೂಕಿಗೆ ನೀಡಿದ್ದು, ಕಾರ್ಮಿಕರು ಯೋಜನೆಯ ಲಾಭವನ್ನು ಪಡೆದುಕೊಳ್ಳಬೇಕು.
> – ಜಿ.ಎಸ್.ಪಾಟೀಲ.
> ಶಾಸಕರು, ರೋಣ.

ಸವಡಿ ಗ್ರಾಮದ ಸವಡಿ–ಹೊನ್ನಾಪೂರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತಗೆ ಬ್ರಿಡ್ಜ್ ಕಂ ಬ್ಯಾ-ರೇಜ್ ನಿರ್ಮಾಣಕ್ಕೆ 2 ಕೋಟಿ 50 ಲಕ್ಷ ರೂ, ಗ್ರಾಮದ ಶಾದಿ ಮಹಲ್ ನಿರ್ಮಾಣಕ್ಕೆ 1 ಕೋಟಿ ರೂ, ಸವಡಿ ಗ್ರಾಮದ ಆರೋಗ್ಯ ಇಲಾಖೆಯ ಸಿಬ್ಬಂದಿಗಳ ವಸತಿ ಗ್ರಹಗಳ ನಿರ್ಮಾಣಕ್ಕೆ 97 ಲಕ್ಷ ರೂ, ಸ್ಮಶಾನ ಅಭಿವೃದ್ಧಿಗೆ 17 ಲಕ್ಷ ರೂಗಳನ್ನು ಈಗಾಗಲೇ ಒದಗಿಸಲಾಗಿದೆ. ಒಟ್ಟಿನಲ್ಲಿ ರೋಣ ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆಯನ್ನು ಸಿದ್ಧಪಡಿಸಲಾಗಿದೆ ಎಂದರು.

ಐ.ಎಸ್. ಪಾಟೀಲ, ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ವೀರಣ್ಣ ಶೆಟ್ಟರ, ಯೂಸುಫ್ ಇಟಗಿ, ಶರಣಪ್ಪ ಬೆಟಗೇರಿ, ಬಸವರಾಜ ನವಲಗುಂದ, ತಾ.ಪಂ ಮಾಜಿ ಸದಸ್ಯರಾದ ಅಂದಪ್ಪ ಬಿಚ್ಚೂರ, ಪ್ರಭು ಮೇಟಿ, ಮುತ್ತಣ್ಣ ಸಂಗಳದ, ಆನಂದ ಚಂಗಳಿ, ಪ್ರಕಾಶ ಹೊಸಳ್ಳಿ, ಸೋಮು ನಾಗರಾಜ ಸೇರಿದಂತೆ ರೋಣ ಹಾಗೂ ಸವಡಿ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಸಂಪಾದಕೀಯ

# ದಶಕಗಳ ಹೋರಾಟದ ಫಲ: ಸ್ವತಂತ್ರ ಬಲೂಚಿಸ್ತಾನದ ಉದಯ

ದಶಕಗಳಿಂದ ಪಾಕಿಸ್ತಾನದಿಂದ ಸ್ವಾತಂತ್ರ್ಯಕ್ಕಾಗಿ ಹೋರಾಡುತ್ತಿರುವ ಬಲೂಚಿಸ್ತಾನವು ಅಂತಿಮವಾಗಿ ತನ್ನ ಸ್ವಾತಂತ್ರ್ಯವನ್ನು ಘೋಷಿಸಿಕೊಂಡಿದೆ. ಬಲೂಚ್ ನಾಯಕರು ಪಾಕಿಸ್ತಾನದಿಂದ ಪ್ರತ್ಯೇಕವಾಗಿ 'ರಿಪಬ್ಲಿಕ್ ಆಫ್ ಬಲೂಚಿಸ್ತಾನ' ಎಂಬ ಹೊಸ ರಾಷ್ಟ್ರದ ರಚನೆಯನ್ನು ಅಧಿಕೃತವಾಗಿ ಪ್ರಕಟಿಸಿದ್ದಾರೆ.

ಈ ಐತಿಹಾಸಿಕ ಘಟನೆಯು ಬಲೂಚಿಸ್ತಾನದ ಸುಮಾರು 6 ಕೋಟಿ ಜನರ ಬಹುಕಾಲದ ಕನಸನ್ನು ನನಸಾಗಿಸಿದೆ ಮತ್ತು ಈ ಪ್ರದೇಶದ ರಾಜಕೀಯ ಭೂಪಟದಲ್ಲಿ ಮಹತ್ವದ ಬದಲಾವಣೆಯನ್ನು ತರುವ ನಿರೀಕ್ಷೆಯಿದೆ.

ಬಲೂಚಿಸ್ತಾನವು ತನ್ನ ಭೌಗೋಳಿಕ ಸ್ಥಾನ ಮತ್ತು ಸಂಪನ್ಮೂಲಗಳಿಗಾಗಿ ಐತಿಹಾಸಿಕವಾಗಿ ಮಹತ್ವ ಪಡೆದಿದೆ. ಆದರೆ, 1947 ರಲ್ಲಿ ಪಾಕಿಸ್ತಾನದೊಂದಿಗೆ ವಿಲೀನಗೊಂಡ ನಂತರ, ಬಲೂಚ್ ಜನರು ತಮ್ಮದೇ ಆದ ಗುರುತಿಗಾಗಿ ಮತ್ತು ಸ್ವಾಯತ್ತತೆಗಾಗಿ ನಿರಂತರವಾಗಿ ಹೋರಾಡುತ್ತಿದ್ದಾರೆ. ಸಂಪನ್ಮೂಲಗಳ ಹಂಚಿಕೆಯಲ್ಲಿನ ತಾರತಮ್ಯ, ರಾಜಕೀಯ ಪ್ರಾತಿನಿಧ್ಯದ ಕೊರತೆ ಮತ್ತು ಮಾನವ ಹಕ್ಕುಗಳ ಉಲ್ಲಂಘನೆಗಳು ಬಲೂಚ್ ರಾಷ್ಟ್ರೀಯತೆಯನ್ನು ಮತ್ತಷ್ಟು ಬಲಪಡಿಸಿವೆ.

ಹಲವಾರು ವರ್ಷಗಳಿಂದ, ಬಲೂಚ್ ರಾಷ್ಟ್ರೀಯವಾದಿ ಗುಂಪುಗಳು ಸಶಸ್ತ್ರ ಹೋರಾಟ ಮತ್ತು ರಾಜಕೀಯ ಪ್ರತಿಭಟನೆಗಳ ಮೂಲಕ ತಮ್ಮ ಬೇಡಿಕೆಗಳನ್ನು ಮುಂದಿಡುತ್ತಾ ಬಂದಿವೆ. ಈ ಹೋರಾಟದಲ್ಲಿ ಅನೇಕ ಜೀವಗಳು ಬಲಿಯಾಗಿವೆ ಮತ್ತು ಪ್ರದೇಶದಲ್ಲಿ ಅಸ್ಥಿರತೆಯ ವಾತಾವರಣವು ನೆಲೆಸಿತ್ತು. ಇದೀಗ, ಬಲೂಚ್ ನಾಯಕರು ಸ್ವಾತಂತ್ರ್ಯದ ಘೋಷಣೆಯೊಂದಿಗೆ ಒಂದು ಹೊಸ ಅಧ್ಯಾಯವನ್ನು ತೆರೆದಿದ್ದಾರೆ.

'ರಿಪಬ್ಲಿಕ್ ಆಫ್ ಬಲೂಚಿಸ್ತಾನ'ದ ಘೋಷಣೆಯು ಅಂತಾರಾಷ್ಟ್ರೀಯ ಸಮುದಾಯದ ಗಮನವನ್ನು ಸೆಳೆದಿದೆ. ಈ ಹೊಸ ರಾಷ್ಟ್ರವನ್ನು ಎಷ್ಟು ರಾಷ್ಟ್ರಗಳು ಮಾನ್ಯ ಮಾಡುತ್ತವೆ ಮತ್ತು ಪಾಕಿಸ್ತಾನದ ಪ್ರತಿಕ್ರಿಯೆ ಹೇಗಿರಲಿದೆ ಎಂಬುದು ಕಾದು ನೋಡಬೇಕಾದ ವಿಷಯವಾಗಿದೆ. ಸ್ವಾತಂತ್ರ್ಯದ ಈ ಘೋಷಣೆಯು ಬಲೂಚಿಸ್ತಾನದ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯ ಭವಿಷ್ಯವನ್ನು ಹೇಗೆ ರೂಪಿಸಲಿದೆ ಎಂಬುದನ್ನು ಕಾಲವೇ ನಿರ್ಧರಿಸಲಿದೆ. ಬಲೂಚಿಸ್ತಾನದ ಸ್ವಾತಂತ್ರ್ಯ ಘೋಷಣೆಯು ದಶಕಗಳ ಹೋರಾಟಕ್ಕೆ ಸಿಕ್ಕಿರುವ ಜಯವಾಗಿದೆ. ಇದು ಬಲೂಚ್ ಜನರಿಗೆ ಹೊಸ ಭರವಸೆಯನ್ನು ಮೂಡಿಸಿದೆ ಮತ್ತು ಈ ಪ್ರದೇಶದಲ್ಲಿ ಶಾಂತಿ ಹಾಗೂ ಸ್ಥಿರತೆಯನ್ನು ನೆಲೆಗೊಳಿಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ. ಆದಾಗ್ಯೂ, ಈ ಹೊಸ ರಾಷ್ಟ್ರವು ಅನೇಕ ಸವಾಲುಗಳನ್ನು ಎದುರಿಸಬೇಕಾಗಿದ್ದು, ಅಂತಾರರಾಷ್ಟ್ರೀಯ ಸಮುದಾಯದ ಬೆಂಬಲವು ಇದರ ಭವಿಷ್ಯವನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

## 'ಗುಲ್ ಮೊಹರ್' ಸುಂದರ ಹೂವಿನ ಮರಗಳ ಕುರಿತು ವಿಶೇಷ ಲೇಖನ

# ಮೇ ತಿಂಗಳ ಸೊಬಗು 'ಗುಲ್ ಮೊಹರ್'





ಭೂಮಿಯ ಮೇಲೆ ಇರುವ ಪ್ರತಿಯೊಂದು ಜೀವಿಗೆ ಮೂಲಭೂತ ಅವಶ್ಯಕತೆಗಳಲ್ಲಿ ಒಂದಾಗಿರುವ ಆಮ್ಲಜನಕ ಪೂರೈಕೆ ಮಾಡುವ ಮರಗಳು ನಮ್ಮ ಇರುವಿಕೆಯನ್ನು ಅಸ್ತಿತ್ವದಲ್ಲಿರುವ ಹಾಗೆ ನೋಡಿಕೊಳ್ಳುತ್ತವೆ. ನಾನೀಗ ಹೇಳಲು ಹೊರಟಿರುವುದು ಸುಂದರ, ಉಜ್ವಲ ಕೆಂಬಣ್ಣದ ಹೂ ಬಿಡುವ ಗುಲ್ಮೊಹರ್ ಮರದ ಬಗ್ಗೆ. ನನ್ನೂರು ರಾಮಗೇರಿಯಿಂದ ಲಕ್ಷ್ಮೇಶ್ವರದ ಇಟ್ಟಿಗೆರೆ, ಬಟ್ಟೂರ ಹಾಗೂ ಗೊಜನೂರ ಮಾರ್ಗದ ರಸ್ತೆ ಬದಿಯಲ್ಲಿ ಕೆಂಪು ಹೂಗಳ ಸಂಭ್ರಮ ಈಗ ಹೇಳತೀರದು. ಹಸಿರು ಎಲೆಗಳಿಗೆ ಒಂಚೂರೂ ಜಾಗ ನೀಡದೇ ಅರಳುವ ಹೂವು ಕಣ್ಮನ ಸೆಳೆಯುತ್ತದೆ.

ಈ ಆಕರ್ಷಕ 'ಗುಲ್ ಮೊಹರ್' ಹೂಗಳು ಬಿರು ಬೇಸಿಗೆಯ ಬಿಸಿಲಲ್ಲಿ ಅರಳುವ ಸುಂದರಿಯರು ಎಂದರೆ ಉತ್ಪ್ರೇಕ್ಷೆಯಲ್ಲ. ಹಾಗೆಯೇ ಈ ವರ್ಷ ಎಪ್ರಿಲ್-ಮೇ ತಿಂಗಳ ಮೂರನೇ ವಾರದಿಂದ ಶಿರಹಟ್ಟಿಯ ಡಬಾಲಿ ಶಾಲೆಯ ಆವರಣದಲ್ಲಿ ಮತ್ತು ತಾಲ್ಲೂಕು ಕ್ರೀಡಾಂಗಣದಲ್ಲಿ ಕೆಂಪು ಹೂಗಳ ಗುಲ್ ಮೊಹರ್ ಮರಗಳು ಕಣ್ಣಿಗೆ ಮತ್ತು ಮನಸ್ಸಿಗೆ ಮುದ ನೀಡುತ್ತವೆ. ಹೀಗೆ ಬಹುತೇಕ ರಸ್ತೆ ಪಕ್ಕದ ಮರಗಳಲ್ಲಿ ಗೋಚರಿಸುವ ವಿಶಿಷ್ಟ, ಅಷ್ಟೇ ವಿಭಿನ್ನ ಬಗೆಯಲ್ಲಿ ಬೆಳೆದು ನಿಲ್ಲುವ ಈ ಗುಲ್ ಮೊಹರ್ ಮರಗಳಲ್ಲಿನ ಕೆಂಪು ಹೂಗಳನ್ನು ಕಂಡ ಕ್ಷಣ ಮನಸ್ಸು ಸೆಳೆವ ಜೊತೆಗೆ ಹಿತಾನುಭವ ನೀಡುತ್ತವೆ.

ಈ ಭಾಗದಲ್ಲಿ ಪ್ರವಾಸಕ್ಕೆ ಬರುವ ಪ್ರವಾಸಿಗರಿಗೆ ತನ್ನ ಚೆಲುವ ಸೊಬಗಿನಿಂದ ಈ ಗುಲ್ ಮೊಹರ್ ಹೂವಿನ ಮರಗಳು ಅವರಿಗೆ ವಿಶಿಷ್ಟ ಸ್ವಾಗತ ಕೋರಿ, ಮನಸ್ಸಿಗೆ ಸಂತೋಷ ನೀಡುತ್ತವೆ. ಇವುಗಳಿಗೆ ಉತ್ತರ ಕರ್ನಾಟಕದಲ್ಲಿ ಸಂಕೇಶ್ವರ ಮರ ಎಂದೇ ಹೆಸರು. ಈ ಗಿಡಗಳು ಪ್ರವಾಸಿಗರನ್ನು ಆಕರ್ಷಿಸುವ ವಿಶಿಷ್ಟವಾದ ಗುಣಗಳನ್ನು ಹೊಂದಿವೆ.

ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಈ ಬಾರಿ ಕೆಂಡದಂತಹ ಉರಿ ಬಿಸಿಲು. ಸೆಕೆಯ ಸಂಕಟ, ತಾಪಕ್ಕೆ ದೂರ ಓಡುವಂತೆ ಮಾಡಿದ್ದರೆ, ಅಂಥಾ ಬಿಸಿಲಲ್ಲಿ ಗುಲ್ (ಹೂ) ಮೊಹರ್ (ನವಿಲು) ಜೀವ ಕಳೆ ಪಡೆದಿರುವಂತೆ, ನಸು ನಗುತ್ತಲೇ ಎಲ್ಲರ ಚಿತ್ತವನ್ನು ತನ್ನತ್ತ ಸೆಳೆಯುವುದು ಈ ಹೂವಿನ ವಿಶೇಷತೆಯಾಗಿಬಿಟ್ಟಿದೆ.

ಡೆಲೋನಿಕ್ಸ್ ರೆಜಿಯಾ ಎಂಬುದು ಗುಲ್ಮೊಹರ್ ಮರದ ವೈಜ್ಞಾನಿಕ ಹೆಸರು. ಇದು ಮಡಗಾಸ್ಕರ್‌ನಲ್ಲಿ ಸ್ಥಳೀಯವಾದ ಸೀಸಲ್ಪಿನಿಯೊಡೆಯೇ ಉಪಕುಟುಂಬದ ಫ್ಯಾಬೇಸಿಯ ಹುರುಳಿ ಕುಟುಂಬದಲ್ಲಿ ಹೂಬಿಡುವ ಸಸ್ಯದ ಒಂದು ಜಾತಿಯಾಗಿದೆ. ಸಸ್ಯಶಾಸ್ತ್ರಜ್ಞ ವೆನ್ಸೆಲ್ ಬೋಜರ್ ಅವರು 19ನೇ ಶತಮಾನದ ಆರಂಭದಲ್ಲಿ ಸಂಶೋಧಿಸಿದರು.

ಇದು ಜರಿ ಗಿಡದಂತಹ ಎಲೆಗಳು ಮತ್ತು ಬೇಸಿಗೆಯಲ್ಲಿ ಕಿತ್ತಳೆ-ಕೆಂಪು ಹೂವುಗಳ ಅಬ್ಬರದ ಪ್ರದರ್ಶನಕ್ಕೆ ಹೆಸರುವಾಸಿಯಾಗಿದೆ. ಪ್ರಪಂಚದ ಅನೇಕ ಉಷ್ಣವಲಯದ ಭಾಗಗಳಲ್ಲಿ ಇದನ್ನು ಅಲಂಕಾರಿಕ ಮರವಾಗಿ ಬೆಳೆಸಲಾಗುತ್ತದೆ ಮತ್ತು ಇಂಗ್ಲೀಷಿನಲ್ಲಿ ಇದನ್ನು ರಾಯಲ್ ಪೊಯಿನ್ಸಿಯಾನಾ, ಫ್ಲಾಂಬಾಯಿಂಟ್, ಫೀನಿಕ್ಸ್ ಹೂವು, ಕಾಡಿನ ಜ್ವಾಲೆ ಅಥವಾ ಜ್ವಾಲೆಯ ಮರ ಎಂದೇ ಹೆಸರುವಾಸಿಯಾಗಿದೆ.

ಹೀಗಾಗಿ ಭಾರತದಲ್ಲಿ ಇದನ್ನು ಮೇ-ಹೂವಿನ ಮರ, ಗುಲ್ಮೊಹರ್ ಅಥವಾ ಗುಲ್ ಮೊಹರ್ ಎಂದು ಕರೆಯಲಾಗುತ್ತದೆ. ಹಾಗೆಯೇ ಪಶ್ಚಿಮ ಬಂಗಾಳ ಮತ್ತು ಒಡಿಶಾದಲ್ಲಿ ಇದನ್ನು ಕೃಷ್ಣ ಚುರಾ ಎಂದು ಕರೆಯಲಾಗುತ್ತದೆ. ಶ್ರೀಲಂಕಾದಲ್ಲಿ ಇದನ್ನು ಸಿಂಹಳದಲ್ಲಿ ಮಾರ ಮರ ಎಂದು ಕರೆಯಲಾಗುತ್ತದೆ.

ಭಾರತದ ಕೇರಳದಲ್ಲಿ ರಾಯಲ್ ಪೊಯಿನ್ಸಿಯಾನಾವನ್ನು ಕಾಲ್ವರಿಪ್ಪು (ಕಾಲ್ವರಿಪೂವ್) ಎಂದು ಕರೆಯಲಾಗುತ್ತದೆ. ಕೇರಳದ ಸಂತ ಥಾಮಸ್ ಕ್ರಿಶ್ಚಿಯನ್ನರಲ್ಲಿ ಒಂದು ಜನಪ್ರಿಯ ನಂಬಿಕೆಯಿದೆ. ಅದೇನೆಂದರೆ, ಯೇಸುವನ್ನು ಶಿಲುಬೆಗೇರಿಸಿದಾಗ, ಅವನ ಶಿಲುಬೆಯ ಸಮೀಪದಲ್ಲಿ ಒಂದು ಸಣ್ಣ ರಾಯಲ್ ಪೊಯಿನ್ಸಿಯಾನ ಮರವಿತ್ತು. ಮರದ ಹೂವುಗಳ ಮೇಲೆ ಯೇಸುಕ್ರಿಸ್ತನ ರಕ್ತವು ಚೆಲ್ಲಲ್ಪಟ್ಟಿತು ಮತ್ತು ರಾಯಲ್ ಪೊಯಿನ್ಸಿಯಾನಾ ಹೂವುಗಳು ತೀಕ್ಷ್ಣವಾದ ಕೆಂಪು ಬಣ್ಣವನ್ನು ಪಡೆದವು ಎಂದು ನಂಬಲಾಗಿದೆ. ಇದನ್ನು ಕೇರಳದ ಹಲವು ಪ್ರದೇಶಗಳಲ್ಲಿ ವಾಗಾ ಎಂದೂ ಕರೆಯುತ್ತಾರೆ.

ಗುಲ್ ಮೊಹರ್ ತನ್ನ ಅಲಂಕಾರಿಕ ಮೌಲ್ಯದ ಜೊತೆಗೆ, ಉಷ್ಣವಲಯದ ಪರಿಸ್ಥಿತಿಗಳಲ್ಲಿ ಇದು ಉಪಯುಕ್ತ ನೆರಳಿನ ಮರವಾಗಿದೆ. ಏಕೆಂದರೆ ಇದು ಸಾಮಾನ್ಯವಾಗಿ ಸಾಧಾರಣ ಎತ್ತರಕ್ಕೆ ಬೆಳೆಯುತ್ತದೆ ಆದರೆ ವ್ಯಾಪಕವಾಗಿ ಹರಡುತ್ತದೆ ಮತ್ತು ಅದರ ದಟ್ಟವಾದ ಎಲೆಗಳು ಪೂರ್ಣ ನೆರಳು ನೀಡುತ್ತದೆ. ಗಮನಾರ್ಹವಾದ ಶುಷ್ಕ ಋತುವಿನ ಪ್ರದೇಶಗಳಲ್ಲಿ, ಇದು ಬರಗಾಲದ ಸಮಯದಲ್ಲಿ ತನ್ನ ಎಲೆಗಳನ್ನು ಚೆಲ್ಲುತ್ತದೆ. ಆದರೆ ಇತರ ಪ್ರದೇಶಗಳಲ್ಲಿ ಇದು ವಾಸ್ತವಿಕವಾಗಿ ನಿತ್ಯಹರಿದ್ವರ್ಣವಾಗಿರುತ್ತದೆ.

ಇದಲ್ಲದೆ ಗುಲ್ ಮೊಹರ್ ವಿಷಕಾರಿಯಲ್ಲದ ಮತ್ತು ಹೂವಿನ ಮೊಗ್ಗುಗಳು ಖಾದ್ಯ ಮತ್ತು ಸುವಾಸನೆಗಾಗಿ ಬಳಸಲಾಗುತ್ತದೆ. ಆದರೆ ಗುಲ್ ಮೊಹರ್ ಕಾಡಿನಲ್ಲಿ ಅಳಿವಿನಂಚಿನಲ್ಲಿರುವುದು ವಿಷಾದನೀಯ ಸಂಗತಿ. ಜಿಲ್ಲಾ ಹಾಗೂ ರಾಜ್ಯ ಹೆದ್ದಾರಿ ನಿರ್ಮಾಣಕ್ಕಾಗಿ ಕಳೆದ ಆರೇಳು ವರ್ಷಗಳ ಹಿಂದೆ ಸಾವಿರಾರು ಗುಲ್ ಮೊಹರ್ ಮರಗಳ ಮಾರಣ ಹೋಮವಾಗಿವೆ. ಮತ್ತೆ ಹೊಸ ಮಾರ್ಗಕ್ಕೆ ಈಗಿನ ಅನೇಕ ಗುಲ್ ಮೊಹರ್ ಮರಗಳು ಬಲಿಯಾಗಿವೆ. ಅಭಿವೃದ್ಧಿ ಹಾಗೂ ತಂತ್ರಜ್ಞಾನದ ಹೊಡೆತಕ್ಕೆ ಸಿಲುಕಿ ಮುಂಬರುವ ದಿನಗಳಲ್ಲಿ ಈ ಸುಂದರ 'ಗುಲ್ ಮೊಹರ್' ಹೂ, ಪ್ರಕೃತಿ ಪ್ರಿಯರಿಗೆ ಅಪರೂಪ ಆಗುತ್ತಿವೆ ಎಂಬುದು ಬೇಸರದ ಸಂಗತಿಯಾಗಿದೆ.



– ಬಸವರಾಜ ಎಮ್.ಯರಗುಪ್ಪಿ.
ಲಕ್ಷ್ಮೇಶ್ವರ.

# ಕರ್ನಲ್ ಸೋಫಿಯಾ ಖುರೇಷಿ 'ಪಾಕಿಸ್ತಾನಿಯರ ಸಹೋದರಿ' ಹೇಳಿಕೆ: ಬಿಜೆಪಿ ಸಚಿವರ ವಜಾಕ್ಕೆ ಕಾಂಗ್ರೆಸ್ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪರೇಷನ್ ಸಿಂಧೂರ್‌ನ ಕುರಿತು ಪತ್ರಿಕಾಗೋಷ್ಠಿಯಲ್ಲಿ ಭಾಗಿಯಾಗಿದ್ದ ಭಾರತೀಯ ಸೇನಾ ಅಧಿಕಾರಿ ಕರ್ನಲ್ ಸೋಫಿಯಾ ಖುರೇಷಿ ಅವರ ಬಗ್ಗೆ ಮಧ್ಯಪ್ರದೇಶದ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ಕುನ್ವರ್ ವಿಜಯ್ ಶಾ ಅವರು ನೀಡಿದ ವಿವಾದಾತ್ಮಕ ಹೇಳಿಕೆಗಳು ರಾಜಕೀಯ ಬಿರುಗಾಳಿಯನ್ನು ಹುಟ್ಟುಹಾಕಿದ್ದು, ಅವರ ವಜಾಕ್ಕೆ ಕಾಂಗ್ರೆಸ್ ಒತ್ತಾಯಿಸಿದೆ.

ಇಂದೋರ್‌ನ ಅಂಬೇಡ್ಕರ್ ನಗರ (ಮೋವ್) ನಲ್ಲಿರುವ ರಾಯ್ಕುಂಡಾ ಗ್ರಾಮದಲ್ಲಿ ಸೋಮವಾರ ನಡೆದ ಕಾರ್ಯಕ್ರಮವೊಂದರಲ್ಲಿ ಸಚಿವ ಶಾ ಅವರು ವಿವಾದಾತ್ಮಕ ಹೇಳಿಕೆ ನೀಡಿ, ಪಹಲ್ಗಾಮ್ ದಾಳಿಯಲ್ಲಿ ಭಾರತೀಯ ಮಹಿಳೆಯರನ್ನು ವಿಧವೆಯರನ್ನಾಗಿ ಮಾಡಿದವರ "ಸಹೋದರಿ"ಯನ್ನು ಪ್ರಧಾನಿ ನರೇಂದ್ರ ಮೋದಿ ಕಳುಹಿಸಿದ್ದಾರೆ ಎಂದು ಹೇಳಿದ್ದರು.

ಕರ್ನಲ್ ಖುರೇಷಿ ಅವರನ್ನು "ಭಯೋತ್ಪಾದಕರಂತೆಯೇ ಅದೇ ಸಮುದಾಯದ ಸಹೋದರಿ" ಎಂದು ಬ್ರಾಂಡ್ ಮಾಡುವ ಮಧ್ಯಪ್ರದೇಶದ ಬಿಜೆಪಿ ಸರ್ಕಾರದ ಸಚಿವರಾದ ಕುನ್ವರ್ ವಿಜಯ್ ಶಾ ಅವರ ಹೇಳಿಕೆಗಳು ತೀವ್ರ ಟೀಕೆಗೆ ಗುರಿಯಾಗಿವೆ.

"ಅವರು (ಭಯೋತ್ಪಾದಕರು) ನಮ್ಮ ಹಿಂದೂ ಸಹೋದರರನ್ನು ಬಟ್ಟೆ ತೆಗೆಯುವಂತೆ ಮಾಡುವ ಮೂಲಕ ಕೊಂದರು. ಪ್ರಧಾನಿ ಮೋದಿ ಅವರು ತಮ್ಮ (ಭಯೋತ್ಪಾದಕರ) ಸಹೋದರಿಯನ್ನು ಸೇನಾ ವಿಮಾನದಲ್ಲಿ ಅವರ ಮನೆಗಳಲ್ಲಿ ಹೊಡೆದುರುಳಿಸಲು ಕಳುಹಿಸುವ ಮೂಲಕ ಪ್ರತಿಕ್ರಿಯಿಸಿದರು. ಅವರು (ಭಯೋತ್ಪಾದಕರು) ನಮ್ಮ ಸಹೋದರಿಯರನ್ನು ವಿಧವೆಯರನ್ನಾಗಿ ಮಾಡಿದರು, ಆದ್ದರಿಂದ ಮೋದಿಜಿ ಅವರ ಸಮುದಾಯದ ಸಹೋದರಿಯರನ್ನು ಅವರ ವಿವಸ್ತ್ರಗೊಳಿಸಿ ಅವರಿಗೆ ಪಾಠ ಕಲಿಸಲು ಕಳುಹಿಸಿದರು" ಎಂದು ಬಿಜೆಪಿ ನಾಯಕರು ಹೇಳಿದ್ದನ್ನು ಪಿಟಿಐ ವರದಿ ಮಾಡಿತ್ತು.

ತಮ್ಮ ಹೇಳಿಕೆಗೆ ತೀವ್ರ ವಿರೋಧ ವ್ಯಕ್ತವಾದ ನಂತರ, ಕುನ್ವರ್ ವಿಜಯ್ ಕ್ಷಮೆಯಾಚಿಸಿದರು, "ತಮ್ಮ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ, ಹತ್ತು ಬಾರಿ ಕ್ಷಮೆಯಾಚಿಸಲು ಸಿದ್ಧನಿದ್ದೇನೆ ಮತ್ತು ಕರ್ನಲ್ ಖುರೇಷಿ ಅವರನ್ನು ತಮ್ಮ ಸಹೋದರಿಗಿಂತ ಹೆಚ್ಚಾಗಿ ಗೌರವಿಸುತ್ತೇನೆ" ಎಂದು ಹೇಳಿದರು.

ಬಿಜೆಪಿ ನಾಯಕನ ವಿರುದ್ಧ ಪ್ರತಿಪಕ್ಷಗಳು ವಾಗ್ದಾಳಿ ಆದಾಗ್ಯೂ, ಪ್ರತಿಪಕ್ಷಗಳು ಅವರ ಹೇಳಿಕೆಗಳನ್ನು ತ್ವರಿತವಾಗಿ ಟೀಕಿಸಿದವು ಮತ್ತು ಮಧ್ಯಪ್ರದೇಶದ ಸಚಿವ ಸಂಪುಟದಿಂದ ವಿಜಯ್ ಶಾ ಅವರನ್ನು ತಕ್ಷಣ ವಜಾಗೊಳಿಸಬೇಕೆಂದು ಒತ್ತಾಯಿಸಿದವು. ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಉಲ್ಲೇಖಿಸಿ 'ಅವಹೇಳನಕಾರಿ' ಹೇಳಿಕೆಗಳನ್ನು ನೀಡಿದ ವಿಜಯ್ ಶಾ ಅವರನ್ನು ತಕ್ಷಣವೇ ವಜಾಗೊಳಿಸಬೇಕು ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

"ಮಧ್ಯಪ್ರದೇಶದ ಬಿಜೆಪಿ ಸರ್ಕಾರದ ಸಚಿವರು ನಮ್ಮ ಧೈರ್ಯಶಾಲಿ ಪುತ್ರಿ ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ಅತ್ಯಂತ ಅವಹೇಳನಕಾರಿ, ನಾಚಿಕೆಗೇಡಿನ ಮತ್ತು ಅಗ್ಗದ ಹೇಳಿಕೆ ನೀಡಿದ್ದಾರೆ. ಪಹಲ್ಗಾಮ್‌ನ ಭಯೋತ್ಪಾದಕರು ದೇಶವನ್ನು ವಿಭಜಿಸಲು ಬಯಸಿದ್ದರು, ಆದರೆ ಭಯೋತ್ಪಾದಕರಿಗೆ ಸೂಕ್ತ ಉತ್ತರ ನೀಡಲು 'ಆಪರೇಷನ್ ಸಿಂಧೂರ್' ಸಮಯದಲ್ಲಿ ದೇಶವು ಒಗ್ಗಟ್ಟಾಗಿತ್ತು" ಎಂದು ಖರ್ಗೆ ಫಿ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮಧ್ಯಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಜಿತು ಪಟ್ವಾರಿ ಅವರು ಫಿ ನಲ್ಲಿ ವಿಜಯ್ ಶಾ ಅವರ ವಿವಾದಾತ್ಮಕ ಹೇಳಿಕೆಯ ವೀಡಿಯೊವನ್ನು ಹಂಚಿಕೊಂಡರು ಮತ್ತು ಸಚಿವರ "ಕೀಳು ಚಿಂತನೆ"ಯೊಂದಿಗೆ ಬಿಜೆಪಿ ಒಪ್ಪುತ್ತದೆಯೇ ಎಂದು ಪ್ರಶ್ನಿಸಿದ್ದಾರೆ.




# ಭಾರತದ ಪ್ರಮುಖ ಸ್ಥಳಗಳ ಮೇಲೆ 15 ಲಕ್ಷ ಸೈಬರ್ ದಾಳಿ ನಡೆಸಿದ ಪಾಕಿಸ್ತಾನಿ ಹ್ಯಾಕರ್‌ಗಳು!

■ ವಿಜಯಸಾಕ್ಷಿ ಸುದ್ದಿ, ಪಾಕಿಸ್ತಾನ

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ದೇಶಾದ್ಯಂತ ಪ್ರಮುಖ ವೆಬ್‌ಸೈಟ್‌ಗಳು, ರಕ್ಷಣಾ ಸಿಬ್ಬಂದಿ ಮತ್ತು ಪತ್ರಕರ್ತರು ಗುರಿಯಾಗಿಸಿಕೊಂಡು 15 ಲಕ್ಷಕ್ಕೂ ಹೆಚ್ಚು ಸೈಬರ್ ದಾಳಿಗಳನ್ನು ನಡೆಸಿದ ಏಳು ಅಡ್ವಾನ್ಸ್ಡ್ ಪರ್ಸಿಸ್ಟೆಂಟ್ ಥ್ರೆಟ್ (ಎಪಿಟಿ) ಗುಂಪುಗಳನ್ನು ಭಾರತೀಯ ಸೈಬರ್ ಏಜೆನ್ಸಿಗಳು ಗುರುತಿಸಿವೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ಭಾರತದ ಪ್ರಮುಖ ಸ್ಥಳಗಳ

ಕೆಲವು ಪಾಕಿಸ್ತಾನಿ ಗುಪ್ತಚರ ಕಾರ್ಯಾಚರಣೆಗಳು (ಪಿಐಒಗಳು) 'ಡ್ಯಾನ್ಸ್ ಆಫ್ ಹಿಲರಿ' ಮತ್ತು 'ಕಾಲ್ಸ್ ಫ್ರಮ್ ಮಿಲಿಟರಿ' ಎಂಬ ಸಂಕೇತನಾಮ ಹೊಂದಿರುವ ಮಾಲ್‌ವೇರ್‌ಗಳ ಮೂಲಕ ಭಾರತದಲ್ಲಿ ರಕ್ಷಣಾ ಸಿಬ್ಬಂದಿ ಮತ್ತು ಪತ್ರಕರ್ತರು ಬಳಸುವ ಮೊಬೈಲ್ ಫೋನ್‌ಗಳನ್ನು ಗುರಿಯಾಗಿಸಿಕೊಂಡಿರುವುದು ಕಂಡುಬಂದಿದೆ ಎಂದು ಅವರು ಹೇಳಿದ್ದಾರೆ.



ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಮಧ್ಯಪ್ರಾಚ್ಯ ಪ್ರದೇಶದಿಂದ ಈ ದಾಳಿಗಳು ನಡೆದಿರುವುದರಿಂದ 15 ಲಕ್ಷ ಸೈಬರ್ ದಾಳಿ ಪ್ರಯತ್ನಗಳಲ್ಲಿ ಕೇವಲ 150 ಮಾತ್ರ ಯಶಸ್ವಿಯಾಗಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ.

"ಭಾರತ-ಪಾಕಿಸ್ತಾನ ಎರಡೂ ಕಡೆಯಿಂದ ಯಾವುದೇ ಗುಂಡಿನ ದಾಳಿ ನಡೆಸದಿರುವ ಒಪ್ಪಂದಕ್ಕೆ ಬಂದ ನಂತರ ಭಾರತದಲ್ಲಿ ಸರ್ಕಾರಿ ವೆಬ್‌ಸೈಟ್‌ಗಳ ಮೇಲಿನ ಸೈಬರ್ ದಾಳಿಗಳು ಕಡಿಮೆಯಾಗಿವೆ ಎಂದು ನಮ್ಮ ತನಿಖೆಯಲ್ಲಿ ಕಂಡುಬಂದಿದೆ. ಅದಾಗ್ಯೂ, ಸಂಪೂರ್ಣವಾಗಿ ನಿಂತಿಲ್ಲ. ಪಾಕಿಸ್ತಾನ, ಬಾಂಗ್ಲಾದೇಶ, ಇಂಡೋನೇಷ್ಯಾ, ಮೊರಾಕೊ ಮತ್ತು ಮಧ್ಯಪ್ರಾಚ್ಯ ದೇಶಗಳಿಂದ ಈ ದಾಳಿಗಳು ಮುಂದುವರೆದಿವೆ." ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ದಾಳಿಯ ಸ್ವರೂಪದ ವಿವರಗಳನ್ನು ನೀಡಿದ ಅಧಿಕಾರಿ, ದಾಳಿಕೋರರು ಮಾಲ್‌ವೇರ್ ಅಭಿಯಾನಗಳನ್ನು ಬಳಸಿದ್ದಾರೆ.


# ಬಂಧಿತ ಬಿಎಸ್‌ಎಫ್ ಸೈನಿಕನನ್ನು ಭಾರತಕ್ಕೆ 21 ದಿನಗಳ ನಂತರ ಹಸ್ತಾಂತರಿಸಿದ ಪಾಕಿಸ್ತಾನ

■ ವಿಜಯಸಾಕ್ಷಿ ಸುದ್ದಿ, ಅಮೃತಸರ

(ಮೇ 14) ಪಂಜಾಬ್‌ನ ಎರಡೂ ದೇಶಗಳ ನಡುವಿನ ಅಂತರರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನದ ರೇಂಜರ್‌ಗಳು ಬಂಧಿಸಿದ ಬಿಎಸ್‌ಎಫ್ ಜವಾನ ಪೂರ್ಣಮ್ ಕುಮಾರ್ ಶಾ ಅವರನ್ನು 21 ದಿನಗಳ ನಂತರ ಬುಧವಾರದಂದು ಪಾಕಿಸ್ತಾನವು ಭಾರತಕ್ಕೆ ಹಸ್ತಾಂತರಿಸಿದೆ.

ಪಾಕಿಸ್ತಾನದ ವಾಘಾ ಎದುರು ಅಮೃತಸರ ಜಿಲ್ಲೆಯ ಅಟ್ಟಾರಿ ಜಂಟಿ ಚೆಕ್ ಪೋಸ್ಟ್ (ಜೆಸಿಪಿ) ನಲ್ಲಿ ಬುಧವಾರ ಬೆಳಿಗ್ಗೆ 10:30ಕ್ಕೆ ಕಾನ್‌ಸ್ಟೆಬಲ್ ಅನ್ನು ಪಾಕಿಸ್ತಾನ ರೇಂಜರ್ಸ್ ಗಳು ಭಾರತದ ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಗೆ ಹಸ್ತಾಂತರಿಸಿದ್ದಾರೆ ಎಂದು ಬಿಎಸ್‌ಎಫ್ ವಕ್ತಾರರು ತಿಳಿಸಿದ್ದಾರೆ.

ಬಿಎಸ್‌ಎಫ್ ಬಿಡುಗಡೆ ಮಾಡಿದ ಜವಾನನ ಚಿತ್ರದಲ್ಲಿ ಗಡ್ಡ ಬಿಟ್ಟಿದ್ದು, ಕೂದಲು ಉದುರಿ, ಕಡು ಹಸಿರು ಬಣ್ಣದ ದುಂಡಗಿನ ಕುತ್ತಿಗೆಯ ಟಿ-ಶರ್ಟ್ ಧರಿಸಿರುವುದು ಕಂಡುಬಂದಿದೆ. "ಇಂದು ಬೆಳಿಗ್ಗೆ 10.30ಕ್ಕೆ ಕಾನ್‌ಸ್ಟೆಬಲ್ ಪೂರ್ಣಮ್ ಕುಮಾರ್ ಶಾ ಅವರನ್ನು ಅಟ್ಟಾರಿ-ವಾಘಾ ಗಡಿಯಲ್ಲಿ ಪಾಕಿಸ್ತಾನದಿಂದ ಭಾರತ ಬಿಎಸ್‌ಎಫ್ ಗೆ ಹಿಂತಿರುಗಿಸಿದೆ" ಎಂದು ವಕ್ತಾರರು ತಿಳಿಸಿದ್ದಾರೆ.



ಏಪ್ರಿಲ್ 23ರಂದು ಫಿರೋಜ್‌ಪುರ ಸೆಕ್ಟರ್ ಪ್ರದೇಶದಲ್ಲಿ ಕಾರ್ಯಾಚರಣೆಯ ಕರ್ತವ್ಯದಲ್ಲಿದ್ದಾಗ ಅವರು "ಅಜಾಗರೂಕತೆಯಿಂದ" ಪಾಕಿಸ್ತಾನ ಪ್ರದೇಶಕ್ಕೆ ದಾಟಿ ಹೋಗಿದ್ದರು ಮತ್ತು ಆಗ ಪಾಕ್ ರೇಂಜರ್‌ಗಳು ಅವರನ್ನು ವಶಕ್ಕೆ ಪಡೆದಿದ್ದರು ಎಂದು ಅವರು ಹೇಳಿದರು. ಜವಾನನಿಗೆ ಪೂರ್ಣ ಆರೋಗ್ಯ ತಪಾಸಣೆ ಮತ್ತು ವೈದ್ಯಕೀಯ ಪರೀಕ್ಷೆ, ನಂತರ ಕೌನ್ಸೆಲಿಂಗ್ ನಡೆಯಲಿದೆ ಎಂದು ಅಧಿಕಾರಿಗಳು ಪಿಟಿಐಗೆ ತಿಳಿಸಿದ್ದಾರೆ. 21 ದಿನಗಳ ಬಂಧನದ ಬಗ್ಗೆ ಬಿಎಸ್‌ಎಫ್ ಅಧಿಕಾರಿಗಳು ಅವರಿಗೆ "ಪ್ರಸ್ತುತ ಪ್ರಶ್ನೆಗಳನ್ನು" ಕೇಳಲಾಗುತ್ತಿದೆ. 24ನೇ ಬಿಎಸ್‌ಎಫ್ ಬೆಟಾಲಿಯನ್‌ಗೆ ಸೇರಿದ ಈ ಜವಾನನನ್ನು ಸಕ್ರಿಯ ಕರ್ತವ್ಯಕ್ಕೆ ಸೇರಿಸಲಾಗುವುದಿಲ್ಲ ಮತ್ತು ರೇಂಜರ್‌ಗಳು ಬಂಧಿಸಿದ ಅನುಕ್ರಮವನ್ನು ಪರಿಶೀಲಿಸಲು ಮತ್ತು ಯಾವುದಾದರೂ ಲೋಪಗಳಿದ್ದರೆ ಕಂಡುಹಿಡಿಯಲು ಬಿಎಸ್‌ಎಫ್‌ನ ಪಂಜಾಬ್ ಗಡಿಭಾಗವು ಸ್ಥಾಪಿಸಿರುವ ಅಧಿಕೃತ ವಿಚಾರಣೆಯ ಭಾಗವಾಗಿರುತ್ತಾರೆ ಎಂದು ಅವರು ಹೇಳಿದರು. ಗಡಿಯಲ್ಲಿ ಜವಾನನ ಹಸ್ತಾಂತರವನ್ನು "ಶಾಂತಿಯುತವಾಗಿ ಮತ್ತು ಶಿಷ್ಟಾಚಾರಗಳಿಗೆ ಅನುಗುಣವಾಗಿ ನಡೆಸಲಾಯಿತು.

# ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ಬಿ.ಆರ್. ಗವಾಯಿ ಪ್ರಮಾಣ ವಚನ ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಬುಧವಾರ ಭಾರತದ 52 ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಮಾಣ ವಚನ ಬೋಧಿಸಿದರು. ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ಮಂಗಳವಾರ ನಿವೃತ್ತರಾದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರ ನಂತರ ಗವಾಯಿ ಅಧಿಕಾರ ವಹಿಸಿಕೊಳ್ಳುತ್ತಾರೆ. ನವೆಂಬರ್ 23 ರಂದು ನಿವೃತ್ತರಾಗಲಿರುವ ಬಿಆರ್ ಗವಾಯಿ ಅವರು ಆರು ತಿಂಗಳ ಅಧಿಕಾರಾವಧಿಯನ್ನು ಹೊಂದಿರುತ್ತಾರೆ.



ಉಪರಾಷ್ಟ್ರಪತಿ ಜಗದೀಪ್ ಧಂಖರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಸಮಾರಂಭದಲ್ಲಿ ಭಾಗವಹಿಸಿದ್ದರು ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ನ್ಯಾಯಮೂರ್ತಿ ಗವಾಯಿ ಅವರು 1987 ಮತ್ತು 1990 ರ ನಡುವೆ ಬಾಂಬೆ ಹೈಕೋರ್ಟ್‌ನಲ್ಲಿ, ಮುಖ್ಯವಾಗಿ ನಾಗ್ಪುರ ಪೀಠದಲ್ಲಿ ವಕೀಲರಾಗಿ ಸೇವೆ ಸಲ್ಲಿಸಿದ್ದರು.

ಅವರು 2000 ರಿಂದ 2003 ರವರೆಗೆ ನಾಗಪುರ ಪೀಠಕ್ಕೆ ಸರ್ಕಾರಿ ವಕೀಲ ಮತ್ತು ಸಾರ್ವಜನಿಕ ಅಭಿಯೋಜಕರಾಗಿ ಸೇವೆ ಸಲ್ಲಿಸಿದ್ದರು. ನಂತರ ಅವರನ್ನು ಹೆಚ್ಚುವರಿ ನ್ಯಾಯಾಧೀಶರನ್ನಾಗಿ ಮಾಡಲಾಯಿತು. 2005 ರಲ್ಲಿ ಅವರು ಖಾಯಂ ನ್ಯಾಯಾಧೀಶರಾದರು. ಗವಾಯಿ ಅವರನ್ನು ಮೇ 2019 ರಲ್ಲಿ ಸುಪ್ರೀಂಕೋರ್ಟ್ ನ್ಯಾಯಾಧೀಶರನ್ನಾಗಿ ಬಡ್ತಿ ನೀಡಲಾಯಿತು.

ನಿವೃತ್ತಿಯ ನಂತರದ ಕೆಲಸವನ್ನು ವಹಿಸಿಕೊಳ್ಳುವುದಿಲ್ಲ: ನಿರ್ಗಮಿತ ಸಿಜೆಐ ನಿರ್ಗಮಿತ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮಂಗಳವಾರ ನಿವೃತ್ತಿಯ ನಂತರದ ಯಾವುದೇ ಕೆಲಸವನ್ನು ವಹಿಸಿಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ ಎಂದು ದಿ ಟೆಲಿಗ್ರಾಫ್ ವರದಿ ಮಾಡಿದೆ.

"ನಾನು ನಿವೃತ್ತಿಯ ನಂತರದ ಯಾವುದೇ ಹುದ್ದೆಗಳನ್ನು ಸ್ವೀಕರಿಸುವುದಿಲ್ಲ. ಆದರೆ ಬಹುಶಃ ನನ್ನ ಮೂರನೇ ಇನ್ನಿಂಗ್ಸ್‌ನಲ್ಲಿ ನಾನು ಕಾನೂನಿಗೆ ಸಂಬಂಧಿಸಿದ ಏನಾದರೂ ಮಾಡುತ್ತೇನೆ" ಎಂದು ಖನ್ನಾ ಹೇಳಿರುವುದಾಗಿ ಉಲ್ಲೇಖಿಸಲಾಗಿದೆ.

ಅವರ ಈ ಹೇಳಿಕೆಯು ಅವರ ಹಿಂದಿನ ಕೆಲವು ಮುಖ್ಯ ನ್ಯಾಯಮೂರ್ತಿಗಳಿಗಿಂತ ಭಿನ್ನವಾಗಿದೆ. ಅವರ ಹಿಂದಿನ ಮುಖ್ಯ ನ್ಯಾಯಮೂರ್ತಿಗಳು ನಿವೃತ್ತಿಯ ನಂತರ ರಾಜ್ಯಪಾಲರು ಅಥವಾ ರಾಜ್ಯಸಭಾ ಸದಸ್ಯರಂತಹ ಹುದ್ದೆಗಳನ್ನು ಅಲಂಕರಿಸಿದ್ದಾರೆ.

## ಗುರುಬಸವ ಸಿಬಿಎಸ್‌ಇ. ಶಾಲೆಗೆ ಉತ್ತಮ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ವತಿಯಿಂದ ನಡೆಯುತ್ತಿರುವ ಗದುಗಿನ ಗುರುಬಸವ ಸಿ.ಬಿ.ಎಸ್.ಇ. ಶಾಲೆಯ ಪ್ರಸಕ್ತ ಸಾಲಿನ 10ನೇ ತರಗತಿ ಫಲಿತಾಂಶ 100ಕ್ಕೆ 100ರಷ್ಟು ಬಂದಿದೆ.

ಪರೀಕ್ಷೆ ಬರೆದ 90 ವಿದ್ಯಾರ್ಥಿಗಳಲ್ಲಿ 55 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 20 ವಿದ್ಯಾರ್ಥಿಗಳು ಪ್ರಥಮ ದರ್ಜೆ, 15 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ. ಸಾನಿಕಾ ಸುನಿಲ ದಿವಾಕರ ಶೇ. 91.5 ಅಂಕಗಳೊಂದಿಗೆ ಶಾಲೆಗೆ ಪ್ರಥಮ ಸೇರಿದಂತೆ ಆದಿತ್ಯ ಪ್ರವೀಣಕುಮಾರ ಬೇವಿನಮರದ, ವಿನಯ ಕೊಟ್ರಪ್ಪ ಉಪ್ಪಿನ, ಅನನ್ಯಾ ದತ್ತಾತ್ರೇಯ ಕುಲಕರ್ಣಿ, ತೇಜಸ್‌ಗೌಡ ಮರಿಗೌಡರ, ಶ್ರೇಯಾ ಶರಣಪ್ಪ ಚವಡಿ, ಪ್ರಥಮೇಶ ತಡಸ, ಮಾನಸಾ ಗೊಡಚಪ್ಪನವರ, ಮಹಿ ಜಿತೆನ್ ನಾಗಡಾ, ಚನ್ನವೀರೇಶ ಫಕೀರಪ್ಪ ರೋಣದ, ಸುದೀಶಾ ಬಿ.ಕಾಳೆ, ಪ್ರಣವ ವೈ. ಭಾಂಡಗೆ ಇವರು ಶೇ. 90ರಿಂದ 86ರವರೆಗೆ ಅಂಕಗಳನ್ನು ಪಡೆದು ಉನ್ನತ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳನ್ನು ಆಡಳಿತ ಮಂಡಳಿ ಅಧ್ಯಕ್ಷರಾದ ಪೂಜ್ಯ ಡಾ.ತೋಂಟದ ಸಿದ್ಧರಾಮ ಶ್ರೀಗಳು, ಶಾಲೆಯ ಪ್ರಾಚಾರ್ಯರಾದ ವಿಜಯಕುಮಾರ ಮಾಲಗಿತ್ತಿ, ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಅಭಿನಂದನೆ ಸಲ್ಲಿಸಿದ್ದಾರೆ.

## ಬಸವೇಶ್ವರ ಸಿಬಿಎಸ್‌ಇ ಶಾಲೆಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಬಸವೇಶ್ವರ ಸಿಬಿಎಸ್‌ಸಿ ಪ್ರೌಢಶಾಲೆಯ ಸಿಬಿಎಸ್‌ಇ ಫಲಿತಾಂಶ ಶೇ. 99ರಷ್ಟಾಗಿದೆ ಎಂದು ಪ್ರಾಚಾರ್ಯ ಬಿ.ಎಚ್. ಬಂಡಿಹಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನುಷಾ ಹಿರೇಗೌಡ್ರ ಶೇ. 90.08 ಅಂಕಗಳೊಂದಿಗೆ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಸ್ನೇಹಾ ಅರಹುಣಸಿ ಶೇ. 84.4 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಮತ್ತು ಅಭಿಷೇಕ ಚವಡಿ ಶೇ. 83.02 ಅಂಕಗಳೊಂದಿಗೆ ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಮತ್ತು ಶಿಕ್ಷಕರನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಚೇರಮನ್ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್. ಆರ್. ಗೌಡರ ಅಭಿನಂದಿಸಿ ಶುಭ ಹಾರೈಸಿದ್ದಾರೆ.

## ರಾಷ್ಟ್ರ ರಕ್ಷಣೆಗಾಗಿ ತಿರಂಗಾಯಾತ್ರೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರ ರಕ್ಷಣೆಗಾಗಿ ಗದಗ ಜಿಲ್ಲಾ ನಾಗರಿಕರ ವೇದಿಕೆಯ ವತಿಯಿಂದ ಮೇ 16ರಂದು ಸಂಜೆ 4 ಗಂಟೆಗೆ ಗದಗ ನಗರ ಜೋಡ್ ಮಾರುತಿ ದೇವಸ್ಥಾನದಿಂದ ಗಾಂಧಿ ಸರ್ಕಲ್‌ವರೆಗೆ ತಿರಂಗಾ ಯಾತ್ರೆಯನ್ನು ಪಕ್ಷಾತೀತವಾಗಿ ಕೈಗೊಳ್ಳಲಾಗಿದೆ.

ಕಾಶ್ಮೀರದ ಪೆಹಲಗಾಂನಲ್ಲಿ ಇತ್ತೀಚೆಗೆ ಪಾಕಿಸ್ತಾನ ಪ್ರಚೋದಿತ ಉಗ್ರರಿಂದ ನಡೆದ ಹತ್ಯಾಕಾಂಡವು ಸಮಗ್ರ ಭಾರತೀಯರ ಸ್ವಾಭಿಮಾನಕ್ಕೆ ಮಾಡಿದ ಅವಮಾನವಾಗಿದೆ. ದೇಶದಲ್ಲಿ ಅಶಾಂತಿ, ಅಸ್ಥಿರತೆಯ ಸೃಷ್ಟಿಗೆ ಪಾಕಿಸ್ತಾನ ಸದಾ ಪ್ರಯತ್ನಿಸುತ್ತಲೇ ಇರುತ್ತದೆ. ಆದರೆ ಆ ಪೈಶಾಚಿಕ ಕೃತ್ಯದ ಹಿತಾಸಕ್ತಿಯು ಯಶಸ್ಸು ಸಾಧಿಸದಂತೆ ನಾವೆಲ್ಲರೂ ಒಗ್ಗೂಡಿ ಜಾಗೃತರಾಗಬೇಕಿದೆ.

'ಆಪರೇಷನ್ ಸಿಂಧೂರ' ಮೂಲಕ ನಮ್ಮ ಸೇನಾಪಡೆಗಳು ಮತ್ತು ಕೇಂದ್ರ ಸರ್ಕಾರ ಉಗ್ರರ ಹಾಗೂ ಅದರ ಪೋಷಕ ಪಾಕಿಸ್ತಾನಕ್ಕೆ ನಿಖರ ಹಾಗೂ ಗರಿಷ್ಠ ಪ್ರಮಾಣದ ಶಿಕ್ಷೆಯನ್ನ ಈಗಾಗಲೇ ನೀಡಿವೆ. ದೇಶದ ಹಿತಕ್ಕಾಗಿ ಗಡಿಯಲ್ಲಿ ಸದಾ ಸನ್ನದ್ಧ ಸ್ಥಿತಿಯಲ್ಲಿರುವ ಭಾರತೀಯ ಸೈನಿಕರ ಜೊತೆ ಜವಾಬ್ದಾರಿಯುತ ನಾಗರಿಕರಾದ ನಾವೆಲ್ಲರೂ ನಿಲ್ಲಬೇಕಿದೆ.

ದೇಶದ ಸೈನಿಕರ ಜೊತೆ ನಾವೆಲ್ಲರೂ ಇದ್ದೇವೆ ಎನ್ನುವದನ್ನು ವಿಶ್ವಕ್ಕೆ ತೋರ್ಪಡಿಸುವದಕ್ಕಾಗಿ ಸಾರ್ವಜನಿಕರು, ಮಾಜಿ ಸೈನಿಕರು, ವಿದ್ಯಾರ್ಥಿಗಳು, ವಕೀಲರು, ವೈದ್ಯರು, ರೈತರು, ಶಿಕ್ಷಕರು, ಕೂಲಿ ಕಾರ್ಮಿಕರು, ಆಟೋ ಚಾಲಕರು, ವ್ಯಾಪಾರಸ್ಥರು, ವಿವಿಧ ಕ್ಷೇತ್ರದ ವೃತ್ತಿಪರರು, ಸಾಧು ಸಂತರು ಹೆಮ್ಮೆಯ ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಪ್ರಕಟಣೆ ವಿನಂತಿಸಿದೆ.

### ಎಸ್.ನಿಜಲಿಂಗಪ್ಪ ಶೈಕ್ಷಣಿಕ ಸಂಸ್ಥೆಯ ನೂತನ ಕಟ್ಟಡಗಳನ್ನು ಉದ್ಘಾಟಿಸಿದ ಶ್ರೀ ರಂಭಾಪುರಿ ಜಗದ್ಗುರುಗಳು

# ಶಿಕ್ಷಣದಿಂದ ಮನುಷ್ಯನ ಬುದ್ಧಿ ವಿಕಾಸ

■ವಿಜಯಸಾಕ್ಷಿ ಸುದ್ದಿ, ಹೊಸದುರ್ಗ

ಆದರ್ಶ ಬದುಕಿಗಾಗಿ ಶಿಕ್ಷಣ ಅಗತ್ಯವಿದೆ. ರವಿ ಕಿರಣದಿಂದ ಪುಷ್ಪ ಅರಳಿದರೆ, ಶಿಕ್ಷಣದಿಂದ ಮನುಷ್ಯನ ಬುದ್ಧಿ ವಿಕಾಸಗೊಳ್ಳುತ್ತದೆ. ಬಾಳೆಗೊಂದು ಗೊನೆಯಿರುವಂತೆ ಬಾಳಿಗೊಂದು ಗುರಿಯಿರಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ನಗರದ ಎಸ್.ನಿಜಲಿಂಗಪ್ಪ ಶೈಕ್ಷಣಿಕ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ನಿರ್ಮಿಸಿದ ನೂತನ ಕಟ್ಟಡಗಳ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕಿನ ಉನ್ನತಿಗೆ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ಬೇಕು. ಮನುಷ್ಯನ ಬುದ್ಧಿ ವಿಕಾಸಗೊಳ್ಳಬೇಕಲ್ಲದೇ ವಿಕಾರಗೊಳ್ಳಬಾರದು. ಕಾಯಿಸಿದ ಚಿನ್ನ ಒಡವೆಯಾಗುತ್ತದೆ. ಬಡಿದ ತಾಮ್ರ ತಂತಿಯಾಗುತ್ತದೆ. ಕೆತ್ತಿದ ಕಲ್ಲು ಮೂರ್ತಿಯಾಗುವಂತೆ ಸಂಸ್ಕಾರದ ಪೆಟ್ಟು ಬಿದ್ದಾಗ ಜೀವನ ವಿಕಾಸಕ್ಕೆ ಕಾರಣವಾಗುತ್ತದೆ. ವಿನಯವಿಲ್ಲದ ವಿದ್ಯೆ ಪ್ರಜ್ಞೆಯಿಲ್ಲದ ಪ್ರತಿಭೆ ವ್ಯರ್ಥ. ಹೊಟ್ಟೆಗೆ ಕಟ್ಟಿದ ಬುತ್ತಿ ಹಳಸುತ್ತದೆ.




ನೆತ್ತಿಗೆ ಕಟ್ಟಿದ ಬುತ್ತಿ ಹುಲುಸಾಗುತ್ತದೆ. ಶಿಕ್ಷಣ ಆರೋಗ್ಯ ಮತ್ತು ಅಭಿವೃದ್ಧಿ ವಿಚಾರಗಳಲ್ಲಿ ರಾಜಕೀಯ ಪ್ರವೇಶ ಮಾಡಬಾರದು. ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡುವುದರಲ್ಲಿ ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆ ಮುಂದಿದೆ ಎಂದು ಹರುಷ ವ್ಯಕ್ತಪಡಿಸಿದ ಜಗದ್ಗುರುಗಳು, ಇದಕ್ಕಾಗಿ ಶ್ರಮಿಸಿದ ಸಂಸ್ಥೆಯ ಎಲ್ಲ ಪದಾಧಿಕಾರಿಗಳ ಸಾಧನೆ ಪರಿಶ್ರಮ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು. ಪುರಸಭಾ ಅಧ್ಯಕ್ಷರಾದ ರಾಜೇಶ್ವರಿ ಆನಂದ, ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಹಲವಾರು ಬದಲಾವಣೆಗಳು ಆಗುತ್ತಿರುವುದನ್ನು ನಾವೆಲ್ಲರೂ ಗಮನಿಸಬೇಕಾದ ಅಗತ್ಯ ಇದೆ ಎಂದರು. ಎಸ್.ಬಿ. ಪ್ರದೀಪಕುಮಾರ್, ಕೆ.ಸಿ. ಮಲ್ಲಿಕಾರ್ಜುನಪ್ಪ, ಆರ್. ಹನುಮಂತಪ್ಪ, ತಹಸೀಲ್ದಾರ್ ತಿರುಪತಿ ಪಾಟೀಲ, ಹಂಜಿ ಶಿವಸ್ವಾಮಿ ಸಂಸ್ಥೆಯ ಬಗೆಗೆ ಅಭಿಮಾನದ ನುಡಿಗಳನ್ನು ನುಡಿದರು.

ಎಸ್.ನಿಜಲಿಂಗಪ್ಪ ಪ.ಪೂ ವಿದ್ಯಾಲಯ ಮತ್ತು ಎಂ.ಪಿ. ಪ್ರಕಾಶ್ ಪ್ರೌಢಶಾಲೆ ಕಟ್ಟಡಗಳನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಉದ್ಘಾಟಿಸಿದರು. ನೊಣವಿನಕೆರೆ ಡಾ. ಕರಿವೃಷಭ ಶಿವಯೋಗೀಶ್ವರ ಸ್ವಾಮಿಗಳು, ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಸಂಸ್ಥೆಯ ಆಡಳಿತ ಮಂಡಳಿಯ ಎಲ್ಲಾ ಸದಸ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಶುಭ ಹಾರೈಸಿದರು. ಕಾರ್ಯದರ್ಶಿ ಕೆ.ಎಸ್. ಕಲ್ಮಠ ಪ್ರಾಸ್ತಾವಿಕ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಎಂ. ಶಿವಲಿಂಗಪ್ಪ ಅಧ್ಯಕ್ಷತೆ ವಹಿಸಿದ್ದರು. ಸಮಾರಂಭಕ್ಕೂ ಮುನ್ನ ಶಾಲಾ ಆವರಣದ ಮಂಟಪದಲ್ಲಿ ವಿದ್ಯಾ ಸಂಸ್ಥೆ ಅಭಿವೃದ್ಧಿ–ಮಕ್ಕಳ ಅಭ್ಯುದಯಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಶಾಸಕ ಬಿ.ಜಿ. ಗೋವಿಂದಪ್ಪ ಮಾತನಾಡಿ, ಎಸ್.ನಿಜಲಿಂಗಪ್ಪನವರ ಹೆಸರಿನಲ್ಲಿ ಸಂಸ್ಥೆ ಪ್ರಾರಂಭಿಸಿದ್ದು ನಾಡಿನ ಜನತೆಗೆ ಹೆಮ್ಮೆ ತಂದಿದೆ. ಎರಡು ದಶಕದ ಅವಧಿಯಲ್ಲಿ ಭವ್ಯ ಸುಂದರ ಕಟ್ಟಡ ನಿರ್ಮಿಸಿ ಉದ್ಘಾಟಿಸುತ್ತಿರುವುದು ಎಲ್ಲ ಪದಾಧಿಕಾರಿಗಳ ಶ್ರಮ ಸಾಧನೆಗೆ ಸಾಕ್ಷಿಯಾಗಿದೆ. ಈ ಸಂಸ್ಥೆಯ ಅಭಿವೃದ್ಧಿಗೆ ನನ್ನ ಸಹಕಾರ ಯಾವಾಗಲೂ ಇದೆ ಎಂದರು.

## ಬೀದಿ ನಾಟಕ ಪ್ರದರ್ಶನ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡೇ–ನಲ್ಮ್ ಇಲಾಖೆಯಿಂದ ಬುಧವಾರ ಕೇಂದ್ರ ಸರ್ಕಾರದ ಪಿ.ಎಮ್ ಸ್ವನಿಧಿ ಯೋಜನೆಯ ಸದುಪಯೋಗಪಡಿಸಿಕೊಳ್ಳುವಂತೆ ಬಿದಿ ನಾಟಕ ಆಯೋಜನೆ ಮಾಡಲಾಗಿತ್ತು. ನಗರದ ನಟರಂಗ ಸಂಸ್ಥೆಯು ಬೀದಿ ನಾಟಕ ಕಾರ್ಯಕ್ರಮವನ್ನು ನಡೆಸಿಕೊಟ್ಟಿತು.

ಬೆಟಗೇರಿ ಹಣ್ಣು, ಹೂ, ತರಕಾರಿ, ಫಾಸ್ಟ್ ಫುಡ್ ಹಾಗೂ ಇತರೆ ವ್ಯಾಪಾರಿಗಳು ಸೇರಿ ಬಿದಿ ನಾಟಕ ವೀಕ್ಷಿಸಿದರು. ಕಾರ್ಯಕ್ರಮದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿಗಳಾದ ಬಸವರಾಜ ಮಲ್ಲೂರ, ಕೌಶಲ್ಯಾಭಿವೃದ್ಧಿ ಇಲಾಖೆ ವ್ಯವಸ್ಥಾಪಕ ಅಧಿಕಾರಿ ಅಂಬರೀಶ, ನಗರಸಭೆ ಸಮುದಾಯ ಸಂಘಟನಾಧಿರಿ ಪ್ರಹ್ಲಾದ, ಬೀದಿ ವ್ಯಾಪಾರಿಗಳ ಮುಖಂಡರಾದ ಫಯಾಜ್ ನಾರಾಯಣಕೇರಿ, ಯಲ್ಲಪ್ಪ, ಜಿಲ್ಲಾ ಮುಖಂಡರಾದ ಮಾರುತಿ ಸೂಳಂಕೆ, ಬಾಷಾಸಾಬ ಮಲ್ಲಸಮುದ್ರ, ಮಹಮ್ಮದ್ ಅಲಿ ಅತ್ತಾರ, ತಬರೇಜ ಪಠಾಣ, ಮಮ್ತಾಜ್ ಜಾಹಂಗಿರ ಮುಳಗುಂದ, ರಾಜು ರೋಣದ, ಮಹಾಬಲಿ ಧಾರವಾಡ, ಅಸ್ಲಾಂ ಸೂಡಿ, ಮುನ್ನಾ ಬಳ್ಳಾರಿ, ರೇಣುಕಾ ಹತ್ತಿವಾಲೆ, ಖುತಿಜಾ ದೊಡ್ಡಮನಿ, ಲಕ್ಷ್ಮವ್ವ ಬೇನಾಳ, ರಾಮಣ್ಣ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

ಗದಗ ನಗರದಲ್ಲಿ ಕೆ. ಹೆಚ್. ಪಾಟೀಲ ವೃತ್ತದ ಬಳಿ ಇರುವ ಬೀದಿ ವ್ಯಾಪಾರಿಗಳ ಸಹಯೋಗದಲ್ಲಿ ಹಾಗೂ ಗ್ರೇನ್ ಮಾರ್ಕೆಟ್ ವ್ಯಾಪಾರಿಗಳ ಸಂಯುಕ್ತ ಆಶ್ರಯದಲ್ಲಿ ಒಟ್ಟು ನಾಲ್ಕು ಹಂತದಲ್ಲಿ ಬಿದಿ ನಾಟಕ ಕಾರ್ಯಕ್ರಮ ನಡೆಸಲಾಯಿತು. ಎಂದು ಬಾಷಾಸಾಬ ಮಲಸಮುದ್ರ ತಿಳಿಸಿದರು.

## ಗೂಳರಡ್ಡಿ ವಕೀಲರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಕೀಲರ ಸಂಘದ ಚುನಾವಣೆಯಲ್ಲಿ ಗದಗ ಜಿಲ್ಲಾ ವಕೀಲರ ಸಂಘದ ಸಹ ಕಾರ್ಯದರ್ಶಿಯಾಗಿ ಆಯ್ಕೆಯಾದ ಚನ್ನರಡ್ಡಿ ಬಸವರಡ್ಡಿ ಗೂಳರಡ್ಡಿಯವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಓಣಿಯ ಹಿರಿಯರಾದ ಶಂಭು ಹುನಗುಂದ, ಮಹೇಶ ಶಟವಾದಿ, ಟೋನಿ ಜೋಶಿ, ಪ್ರಶಾಂತ ನರಗುಂದ, ಶರಣಪ್ಪ ಸಂಗನಾಳ, ಸವಿತಾ ಸಂಗನಾಳ, ಸತೀಶ ಕಟ್ಟಿಮನಿ, ವಿನೋದ ಮಿಸಾಳ, ಮಹಾಂತೇಶ ಕುಲಕರ್ಣಿ, ಹುಣಸೀಮರದ, ರಾಮಕುಮಾರ ಅಗಸಿಮನಿ, ವಿಜಯಕುಮಾರ ಸೇರಿದಂತೆ ಕುಷ್ಟಗಿ ಚಾಳ ಮತ್ತು ವೆಲ್‌ಫೇರ್ ಟೌನ್‌ನ ಗುರುಹಿರಿಯರು, ಯುವಕರು ಇದ್ದರು.

ಲಕ್ಷ್ಮಣ ವಡ್ಡರಕಲ್ಲ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## 'ಮೈ ಭಾರತ್' ಸ್ವಯಂಸೇವಕರಾಗಲು ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಮತ್ತು ಕ್ರೀಡಾ ಸಚಿವಾಲಯದ 'ಮೈ ಭಾರತ್' ಕಾರ್ಯಕ್ರಮವು ದೇಶದಾದ್ಯಂತ ಯುವಕರನ್ನು ನಾಗರಿಕ ರಕ್ಷಣಾ ಸ್ವಯಂಸೇವಕರಾಗಿ ನೋಂದಾಯಿಸಿಕೊಳ್ಳಲು ಸಕ್ರಿಯವಾಗಿ ಪ್ರೇರೇಪಿಸುತ್ತಿದೆ. ಈ ಆಹ್ವಾನವು ತುರ್ತು ಪರಿಸ್ಥಿತಿಗಳು ಮತ್ತು ಬಿಕ್ಕಟ್ಟಿನ ಸಮಯದಲ್ಲಿ ರಾಷ್ಟ್ರೀಯ ಕಾರಣಕ್ಕಾಗಿ ಮಹತ್ವಪೂರ್ಣ ಪಾತ್ರ ವಹಿಸಲು ಯುವ ನಾಗರಿಕರನ್ನು ಸಶಕ್ತಗೊಳಿಸುವ ಉದ್ದೇಶವನ್ನು ಹೊಂದಿದೆ.

ಈ ಯೋಜನೆಯು ಉತ್ತಮ ತರಬೇತಿ ಪಡೆದ, ಸ್ಪಂದಿಸುವ ಮತ್ತು ಆತ್ಮಸ್ಥೈರ್ಯದಿಂದಿರುವ ಸ್ವಯಂಸೇವಕರ ದಳವನ್ನು ನಿರ್ಮಿಸುವ ಉದ್ದೇಶ ಹೊಂದಿದ್ದು, ನೈಸರ್ಗಿಕ ವಿಪತ್ತುಗಳು, ಅಪಘಾತಗಳು, ಸಾರ್ವಜನಿಕ ತುರ್ತು ಪರಿಸ್ಥಿತಿಗಳು ಮತ್ತು ಇತರ ಅನಿರೀಕ್ಷಿತ ಸಂದರ್ಭಗಳಲ್ಲಿ ನಾಗರಿಕ ಆಡಳಿತಕ್ಕೆ ಪೂರಕವಾಗಿರುತ್ತದೆ.

ಇದರಲ್ಲಿ ರಕ್ಷಣೆ ಮತ್ತು ಸ್ಥಳಾಂತರ ಕಾರ್ಯಾಚರಣೆಗಳು, ಪ್ರಾಥಮಿಕ ಚಿಕಿತ್ಸೆ ಮತ್ತು ತುರ್ತು ಆರೈಕೆ, ಸಂಚಾರ ನಿರ್ವಹಣೆ, ಜನಸಮೂಹ ನಿಯಂತ್ರಣ, ಸಾರ್ವಜನಿಕ ಭದ್ರತೆ, ಮತ್ತು ವಿಪತ್ತು ಪ್ರತಿಕ್ರಿಯೆ ಮತ್ತು ಪುನಶ್ಚೇತನ ಕಾರ್ಯಗಳಲ್ಲಿ ಸಹಾಯ ಮಾಡುವುದು ಒಳಗೊಂಡಿದೆ. ಸಿದ್ಧತೆಯುಳ್ಳ ಮತ್ತು ತರಬೇತಿಯಾದ ನಾಗರಿಕ ಪಡೆಯಿದ್ದು, ಮೈ ಭಾರತ ತನ್ನದಾದ ಕೊಡುಗೆ ನೀಡಲು ಬದ್ಧವಾಗಿದೆ.

ಈಗಿನ ಮೈ ಭಾರತ್ ಸ್ವಯಂಸೇವಕರು ಮತ್ತು ಈ ಜವಾಬ್ದಾರಿ ತೆಗೆದುಕೊಳ್ಳಲು ಆಸಕ್ತರು ಇರವವರು ಸೇರಬಹುದಾಗಿದೆ. ಈ ಪ್ರಸ್ತಾಪವು ಯುವಕರಲ್ಲಿ ನಾಗರಿಕ ಜವಾಬ್ದಾರಿ ಮತ್ತು ಶಿಸ್ತನ್ನು ಬೆಳೆಸುವುದರ ಜೊತೆ–ಗೆ, ತುರ್ತು ಸಂದರ್ಭಗಳಲ್ಲಿ ತಕ್ಷಣ ಪ್ರತಿಕ್ರಿಯೆ ನೀಡಲು ಅಗತ್ಯವಿರುವ ಜೀವ ಉಳಿಸುವ ಕೌಶಲ್ಯಗಳನ್ನು ಕಲಿಯುವ ಅವಕಾಶವನ್ನೂ ನೀಡುತ್ತದೆ. ನೋಂದಣಿಗಾಘಿ ಅಧಿಕೃತ ಮೈ ಭಾರತ್ ಪೋರ್ಟಲ್ https://mybharat.gov.in ಇಲ್ಲಿ ಲಭ್ಯವಿದೆ. ಹೆಚ್ಚಿನ ಮಾಹಿತಿಗಾಗಿ 8618215740 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಕರ್ನಲ್ ಸೋಫಿಯಾ ವಿರುದ್ಧ ಭಯೋತ್ಪಾದಕರ ಸಹೋದರಿ ಹೇಳಿಕೆ: ಬಿಜೆಪಿ ಸಚಿವರ ವಿರುದ್ಧ ಎಫ್‌ಐಆರ್ ದಾಖಲಿಸಲು ಹೈಕೋರ್ಟ್ ಆದೇಶ

■ವಿಜಯಸಾಕ್ಷಿ ಸುದ್ದಿ, ಜಬಲ್ಪುರ





ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಗುರಿಯಾಗಿಸಿಕೊಂಡು ವಿವಾದಾತ್ಮಕ ಹೇಳಿಕೆ ನೀಡಿದ್ದಕ್ಕಾಗಿ ಮಧ್ಯಪ್ರದೇಶದ ಹೈಕೋರ್ಟ್ ಬುಧವಾರ ರಾಜ್ಯ ಸಚಿವ ವಿಜಯ್ ಶಾ ವಿರುದ್ಧ ಎಫ್‌ಐಆರ್ ದಾಖಲಿಸಲು ಆದೇಶಿಸಿದೆ.

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಮತ್ತು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಶಾ ಅವರೊಂದಿಗೆ ಭಯೋತ್ಪಾದಕರನ್ನು ಹೊಡೆದುರುಳಿಸಲು ಭಾರತೀಯ ಸಶಸ್ತ್ರ ಪಡೆಗಳು ಪ್ರಾರಂಭಿಸಿದ 'ಆಪರೇಷನ್ ಸಿಂಧೂರ್' ವಿವರಗಳನ್ನು ಹಂಚಿಕೊಂಡ ಕರ್ನಲ್ ಖುರೇಷಿ ನಿಯಮಿತವಾಗಿ ಪತ್ರಿಕಾಗೋಷ್ಠಿಗಳನ್ನು ನಡೆಸುತ್ತಿದ್ದರು.

ಬುಡಕಟ್ಟು ವ್ಯವಹಾರಗಳ ಸಚಿವ ಮತ್ತು ಬಿಜೆಪಿ ನಾಯಕ ವಿಜಯ್ ಶಾ ಅವರು, ಕರ್ನಲ್ ಖುರೇಷಿ ಅವರನ್ನು "ಪಾಕಿಸ್ತಾನದ ಭಯೋತ್ಪಾದಕರ ಸಹೋದರಿ" ಎಂದು ಬಿಂಬಿಸಲು ಪ್ರಯತ್ನಿಸಿದ ಆಕ್ಷೇಪಾರ್ಹ ಹೇಳಿಕೆಗಳೊಂದಿಗೆ ದೊಡ್ಡ ವಿವಾದವನ್ನು ಹುಟ್ಟುಹಾಕಿದರು.

ವಿವಾದಾತ್ಮಕ ಹೇಳಿಕೆಯನ್ನು ಸ್ವಯಂಪ್ರೇರಿತವಾಗಿ ಸ್ವೀಕರಿಸಿದ ಮಧ್ಯಪ್ರದೇಶದ ಹೈಕೋರ್ಟ್‌ನ ನ್ಯಾಯಮೂರ್ತಿಗಳಾದ ಅತುಲ್ ಶ್ರೀಧರನ್ ಮತ್ತು ಅನುರಾಧಾ ಶುಕ್ಲಾ ಅವರ ವಿಭಾಗೀಯ ಪೀಠವು ಸಚಿವರ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸುವಂತೆ ಪೊಲೀಸರಿಗೆ ಆದೇಶಿಸಿತು. ಬುಧವಾರ ಸಂಜೆ 6 ಗಂಟೆಯೊಳಗೆ ಎಫ್‌ಐಆರ್ ದಾಖಲಿಸುವಂತೆ ನ್ಯಾಯಾಲಯ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿತು. ಎಫ್‌ಐಆರ್ ದಾಖಲಿಸಿರುವ ಬಗ್ಗೆ ನ್ಯಾಯಾಲಯಕ್ಕೆ ತಿಳಿಸಬೇಕು ಎಂದು ವಿಭಾಗೀಯ ಪೀಠ ಹೇಳಿದೆ. ಅರ್ಜಿಯ ಮುಂದಿನ ವಿಚಾರಣೆಯನ್ನು ಗುರುವಾರ ಬೆಳಿಗ್ಗೆ 10.30 ಕ್ಕೆ ನಿಗದಿಪಡಿಸಲಾಗಿದೆ. ವಿವರವಾದ ಆದೇಶಕ್ಕಾಗಿ ಕಾಯಲಾಗುತ್ತಿದೆ. ಶಾ ಅವರ ಹೇಳಿಕೆಗೆ ವ್ಯಾಪಕ ಖಂಡನೆ ವ್ಯಕ್ತವಾಗಿದ್ದು, ಕಾಂಗ್ರೆಸ್ ಅವರನ್ನು ಸಂಸದ ಸಂಪುಟದಿಂದ ತಕ್ಷಣ ವಜಾಗೊಳಿಸಬೇಕೆಂದು ಒತ್ತಾಯಿಸಿದೆ.

ತೀವ್ರ ಟೀಕೆಗೆ ಒಳಗಾದ ಶಾ, ತಮ್ಮ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ, 10 ಬಾರಿ ಕ್ಷಮೆಯಾಚಿಸಲು ಸಿದ್ಧ ಎಂದು ಹೇಳಿದರು ಮತ್ತು ತಮ್ಮ ಸಹೋದರಿಗಿಂತ ಕರ್ನಲ್ ಖುರೇಷಿ ಅವರನ್ನು ಹೆಚ್ಚು ಗೌರವಿಸುವುದಾಗಿ ಹೇಳಿದರು.

# ತಾಂತ್ರಿಕ ವೃತ್ತಿ ತರಬೇತಿ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಹತ್ತನೇ ತರಗತಿ ಉತ್ತೀರ್ಣ ಮತ್ತು ಅನುತ್ತೀರ್ಣರಾದ ಯುವಕರಿಗೆ ಟೂಲರೂಮ್ ಮಶಿನಿಸ್ಟ್ ತಾಂತ್ರಿಕ ವೃತ್ತಿ ತರಬೇತಿಗೆ ಪ್ರವೇಶ ಪ್ರಾರಂಭವಾಗಿರುತ್ತದೆ.

ಈ ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಹೆಚ್ಚಿನ ಬೇಡಿಕೆಯಿರುತ್ತದೆ. ಒಂದೇ ಕೋರ್ಸಿನಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್, ಸಿಎನ್‌ಸಿ, ಕ್ಯಾಡ್–ಕ್ಯಾಮ್ ಮತ್ತು ಟೂಲ್ ಆಂಡ್ ಡೈ ಮೇಕಿಂಗ್ ಟ್ರೇಡ್‌ಗಳಲ್ಲಿ ಆನ್ ದಿ ಜಾಬ್ ತರಬೇತಿ ನೀಡುವುದರಿಂದ ವಿದ್ಯಾರ್ಥಿಗಳಿಗೆ ಹೆಚ್ಚು ಉದ್ಯೋಗಾವಕಾಶಗಳು ದೊರಕುತ್ತವೆ. ಜೊತೆಗೆ ಅಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಲಾಗುತ್ತದೆ.

ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಅಳವಡಿಸಿಕೊಂಡಿದ್ದು, ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಶಿಕ್ಷಕರನ್ನು ಹೊಂದಿದೆ. ತರಬೇತಿಯ ನಂತರ ವಿದ್ಯಾರ್ಥಿಗಳಿಗೆ ಟೂಲಿಂಗ್, ವಿಮಾನ ತಯಾರಿಕೆ, ಮತ್ತು ಅಟೊಮೊಬೈಲ್ ವಲಯಗಳ ಪ್ರತಿಷ್ಠಿತ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು. ಕಳೆದ ವರ್ಷ ಜಿಟಿಟಿಸಿಯಲ್ಲಿ ತರಬೇತಿ ಪಡೆದ ಎಲ್ಲ ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನದ ಮೂಲಕ ಏರೋಸ್ಪೇಸ್ ಉತ್ಪಾದನೆ ಮತ್ತು ಟೂಲರೂಮ್ ಕೈಗಾರಿಕೆಗಳಲ್ಲಿ ನೇಮಕಾತಿ ಹೊಂದಿರುತ್ತಾರೆ.

ಆಸಕ್ತ ಅಭ್ಯರ್ಥಿಗಳು ಮೇ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ತರಬೇತಿಗಳು ಜೂನ್ 2 ರಿಂದ ಪ್ರಾರಂಭವಾಗಲಿವೆ. ಆಸಕ್ತ ಅಭ್ಯರ್ಥಿಗಳು ಹುಬ್ಬಳ್ಳಿ ಮತ್ತು ನರಗುಂದ ಕೇಂದ್ರಗಳಿಗೆ ಭೇಟಿ ನೀಡಿ ಪ್ರವೇಶ ಪಡೆಯಬಹುದು.

ಹೆಚ್ಚಿನ ಮಾಹಿತಿಗೆ ಜಿಟಿಟಿಸಿ, ಗೋಕುಲ ರಸ್ತೆ, ಹುಬ್ಬಳ್ಳಿ. ದೂರವಾಣಿ 8183860552, 9902101010 ಮತ್ತು ಜಿಟಿಟಿಸಿ, ಅಳಗವಾಡಿ ರಸ್ತೆ, ನರಗುಂದ. ದೂರವಾಣಿ 8088536896 ಸಂಪರ್ಕಿಸಬಹುದಾಗಿದೆ ಎಂದು ಜಿಟಿಟಿಸಿ ಹುಬ್ಬಳ್ಳಿ ಮತ್ತು ನರಗುಂದ ಮೊಬೈಲ್ ನಂಬರ್ ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಪುರಸಭೆಯಲ್ಲಿ 2 ಇಂಟರ್ನ್ ಹೆಲ್ತ್ ಇನ್‌ಸ್ಪೆಕ್ಟರ್ ಹುದ್ದೆಗೆ ಕೇವಲ ಒಂದು ವರ್ಷ ಕೌಶಲ್ಯ ಮತ್ತು ಸಾಮರ್ಥ್ಯ ವೃದ್ಧಿಪಡಿಸುವ ಉದ್ದೇಶದಿಂದ ಅರ್ಜಿ ಕರೆಯಲಾಗಿದೆ. ಆಸಕ್ತಿಯುಳ್ಳವರು ಮೇ 22ರೊಳಗಾಗಿ TULIP INTERNSHIP PROGRAMMEನ್ನು http://intership.aicte.india.org ತಂತಾಂಶದಲ್ಲಿನೋಂದಾಯಿಸಿಕೊಳ್ಳಬಹುದಾಗಿದೆ. ತಾತ್ಕಲಿಕವಾಗಿ ಪರೀಕ್ಷಾರ್ಥ ತರಬೇತಿ ಅಭ್ಯರ್ಥಿಗಳ ಆಯ್ಕೆಗಾಗಿ ಕರ್ತವ್ಯ ನಿರ್ವಹಿಸಿದವರಿಗೆ ಕಚೇರಿಯಿಂದ ಪ್ರಮಾಣಪತ್ರ ನೀಡಲಾಗುವುದು. ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು ಮತ್ತು ಇದು ಒಂದು ತಾತ್ಕಾಲಿಕ ತರಬೇತಿ (ಇಂಟರ್ನ್‌ಶಿಪ್) ಮಾತ್ರ ಆಗಿದ್ದು ಖಾಯಂ ನೇಮಕಾತಿಗೆ ಅವಕಾಶವಿರುವುದಿಲ್ಲ ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ನಿಧನ

### ಹಾಲಪ್ಪ ಹೊರಕೇರಿ



ಲಕ್ಕುಂಡಿ: ಇಲ್ಲಿಯ ಕಲ್ಮೇಶ್ವರ ನಗರದ ನಿವಾಸಿ ಹಾಲಪ್ಪ ಫಕೀರಪ್ಪ ಹೊರಕೇರಿ (60) ನಿಧನರಾಗಿದ್ದಾರೆ. ಮೃತರು ಪತ್ನಿ, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

# ಹುತಾತ್ಮ ಸೈನಿಕರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ




ಕರ್ನಾಟಕ ರಾಜ್ಯ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ವತಿಯಿಂದ ನಗರದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ವೀರ ಮರಣ ಹೊಂದಿದ ಭಾರತೀಯ ಸೈನಿಕರಿಗೆ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ರಾಜ್ಯ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳಗುಂದ ಮಾತನಾಡಿ, ದೇಶಕ್ಕಾಗಿ ವೀರ ಮರಣ ಹೊಂದಿದ ಯೋಧರ ಬಲಿದಾನದಿಂದ ನಾವೆಲ್ಲ ಈಗ ಸುರಕ್ಷಿತವಾಗಿದ್ದೇವೆ. ಅವರ ಬಲಿದಾನವನ್ನು ಸದಾ ಸ್ಮರಿಸಬೇಕೆಂದು ಹೇಳಿ ಎರಡು ನಿಮಿಷ ಮೌನಾಚರಣೆಯ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಸಂಘದ ರಾಜ್ಯ ಯುವ ಘಟಕದ ಅಧ್ಯಕ್ಷ ಸಿರಾಜ್ ಲಕ್ಕುಂಡಿ ಮಾತನಾಡಿ, ಉಗ್ರರ ದಾಳಿಗೆ ಪ್ರತೀಕಾರವಾಗಿ ಭಾರತದ ಸೈನಿಕರು ಸೂಕ್ತ ಪ್ರತ್ಯುತ್ತರ ನೀಡಿ ಅಲ್ಲಿನ ಉಗ್ರರ ನೆಲೆಗಳನ್ನು ಧ್ವಂಸ ಮಾಡಿದ್ದಾರೆ. ಈ ಕಾರ್ಯಾಚರಣೆಯಲ್ಲಿ ವೀರ ಮರಣ ಹೊಂದಿದ ಯೋಧರ ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಹೇಳಿದರು.

ಸಂಘದ ಗದಗ ತಾಲೂಕಾ ಸಹ ಕಾರ್ಯದರ್ಶಿ ಶಂಭುಲಿಂಗೇಶ ಎಸ್.ಗಾಣಿಗೇರ ಮಾತನಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ ಟಿ.ಮುಧೋಳ, ರೇಖಾ ಹುಲ್ಲೂರ, ಮಂಜು ಡೋಣಿ, ಪ್ರಶಾಂತ ಕಟ್ಟಿಮನಿ, ಎಲ್.ಡಿ. ಮೂಲಿಮನಿ, ವೆಂಕಟೇಶ ಜುನಜಮಕಿ, ಕರವೇ ಮುಖಂಡರಾದ ಆಶಾ ಜೂಲಗುಡ್ಡ, ನಿಂಗನಗೌಡ ಮಾಲೀಮಾಟೀಲ, ಹರ್ಲಾಪೂರ ಗ್ರಾಮದ ಯುವ ಘಟಕ ಹಾಗೂ ಹರ್ಲಾಪುರ ಗ್ರಾಮದ ಸದಸ್ಯರು, ಅಸುಂಡಿ ಗ್ರಾಮ ಘಟಕದ ಸದಸ್ಯರು, ಅಟೋ ಸಂಘದ ಸಂತೋಷ, ಸರ್ಫರಾಜ, ಕಿರಣ ಸೇರಿದಂತೆ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

## ಜೆ.ಟಿ ಸಿಬಿಎಸ್‌ಇ ಶಾಲೆಯ ಫಲಿತಾಂಶ ಶೇ. 99

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಇಲ್ಲಿನ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ವತಿಯಿಂದ ಗಜೇಂದ್ರಗಡದಲ್ಲಿ ನಡೆಯುತ್ತಿರುವ ಜಗದ್ಗುರು ತೋಂಟದಾರ್ಯ ಸಿ.ಬಿ.ಎಸ್.ಇ ಶಾಲೆಯ ಫಲಿತಾಂಶ ಶೇ.99ರಷ್ಟು ಆಗಿದೆ.

ಪರೀಕ್ಷೆಗೆ ಹಾಜರಾದ 90 ವಿದ್ಯಾರ್ಥಿಗಳಲ್ಲಿ 89 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದರಲ್ಲಿ 18 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 20 ವಿದ್ಯಾರ್ಥಿಗಳು ಪ್ರಥಮ ದರ್ಜೆ, 35 ವಿದ್ಯಾರ್ಥಿಗಳು ದ್ವಿತೀಯ ದರ್ಜೆ, 16 ವಿದ್ಯಾರ್ಥಿಗಳು ಉತ್ತೀರ್ಣ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ಅದಿತಿ ಪಾಟೀಲ ಶೇ. 87 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ತಬಸ್ಸುಮ್ ಹುನಗುಂದ ಶೇ.85.80 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಅಂಕಿತ ಬೂದಿಹಾಳ ಹಾಗೂ ಸಂಜಯ ರಾಜೂರ ಇವರು ಶೇ.82.40 ಅಂಕಗಳನ್ನು ಪಡೆದು ತೃತೀಯ ಸ್ಥಾನದೊಂದಿಗೆ ಉತ್ತೀರ್ಣರಾಗಿದ್ದಾರೆ.

ಉತ್ತಮ ಫಲಿತಾಂಶ ಪಡೆದ ಎಲ್ಲ ವಿದ್ಯಾರ್ಥಿಗಳನ್ನು ಶಾಲೆಯ ಪ್ರಾಚಾರ್ಯರಾದ ಕವಿತಾ ಪಾಟೀಲ, ಆಡಳಿತ ಮಂಡಳಿ ಅಧ್ಯಕ್ಷರಾದ ಪೂಜ್ಯ ಡಾ. ತೋಂಟದ ಸಿದ್ಧರಾಮ ಶ್ರೀಗಳು ಮತ್ತು ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿಯವರು ಅಭಿನಂದನೆ ಸಲ್ಲಿಸಿದ್ದಾರೆ.

## ಕೋಲ್ಕತ್ತಾ | ಚಲಿಸುವ ಟ್ಯಾಕ್ಸಿಯಲ್ಲಿ 2 ಕೋಟಿ ರೂ. ದರೋಡೆ; ಪೊಲೀಸ್ ಅಧಿಕಾರಿ ಬಂಧನ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಖಾಸಗಿ ಸಂಸ್ಥೆಯ ಇಬ್ಬರು ಉದ್ಯೋಗಿಗಳು ಕೊಲ್ಕತ್ತಾದ ಎಂಟಲ್ಲಿ ಪ್ರದೇಶದಲ್ಲಿ ಟ್ಯಾಕ್ಸಿಯಲ್ಲಿ ಪ್ರಯಾಣಿಸುತ್ತಿದ್ದಾಗ ಅವರಿಂದ 2.66 ಕೋಟಿ ರೂ. ಲೂಟಿ ಮಾಡಿದ್ದ ಆರೋಪದ ಮೇಲೆ ಬುಧವಾರ ಪೊಲೀಸ್ ಸಹಾಯಕ ಸಬ್ ಇನ್ಸ್‌ಪೆಕ್ಟರ್ ಒಬ್ಬರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಸುದ್ದಿಗೋಷ್ಠಿಯಲ್ಲಿ ಸ್ಪಷ್ಟನೆ ನೀಡಿದ ಶ್ರೀರಾಮ ಸೇನೆ ಮುಖಂಡ ರಾಜು ಖಾನಪ್ಪನವರ

# ಕಾನೂನು ಹೋರಾಟಕ್ಕೆ ಮುಂದಾಗುತ್ತೇವೆ

■ ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ಮಠದ ಎದುರಿನ ರಸ್ತೆ ಶ್ರೀಮಠದ ಒಡೆತನಕ್ಕೆ ಸೇರಿದ್ದಾಗಿದೆ ಎಂದು ನಗರಸಭೆ ಅಧಿಕಾರಿಗಳು ಮಾಹಿತಿ ನೀಡಿದ ಹಿನ್ನೆಲೆಯಲಿದೀ ಹಿಂದೆ ಕರೆನೀಡಿದ್ದ ಅನಿರ್ದಿಷ್ಟಾವಧಿ ಹೋರಾಟ ಮತ್ತು ಗದಗ ಬಂದ್ ಕೈಬಿಟ್ಟು, ಕಾನೂನು ಹೋರಾಟ ಆರಂಭಿಸುತ್ತೇವೆ ಎಂದು ಶ್ರೀರಾಮ ಸೇನೆ ಮುಖಂಡ ರಾಜು ಖಾನಪ್ಪನವರ ತಿಳಿಸಿದರು.




ಬುಧವಾರ ನಗರದ ಪತ್ರಿಕಾ ಭವನದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀರಾಮ ಸೇನೆ, ಆಟೋ ಸೇನೆ ಹಾಗೂ ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ಆಶ್ರಯದಲ್ಲಿ, ತೋಂಟದಾರ್ಯ ಮಠದ ಮುಂದಿನ ಸಾರ್ವಜನಿಕರ ರಸ್ತೆಯನ್ನು ದುರ್ಬಳಕೆ ಮಾಡಿಕೊಂಡಿರುವ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಎದುರು ಹೋರಾಟ ಕೈಗೊಳ್ಳಲಾಗಿತ್ತು. ಆದರೆ ಮೇ 13ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಗರಸಭೆ ಅಧಿಕಾರಿಗಳು, ಆ ರಸ್ತೆ ಶ್ರೀಮಠಕ್ಕೆ ಸೇರಿದೆ ಎಂದು ಸ್ಪಷ್ಟಪಡಿಸಿದ್ದರಿಂದ ನಮ್ಮ ಹೋರಾಟದಿಂದ ಹಿಂದೆ ಸರಿದಿದ್ದು, ಮೇ 15ರಂದು ಕರೆ ನೀಡಲಾಗಿದ್ದ ಬಂದ್ ಹಿಂಪಡೆದಿದ್ದೇವೆ ಎಂದು ತಿಳಿಸಿದರು. ತೋಂಟದಾರ್ಯ ಮಠದ ಮುಂದಿನ ರಸ್ತೆ ದುರ್ಬಳಕೆ ಕುರಿತು 2016ರಿಂದಲೂ ಹೋರಾಟ ಮಾಡುತ್ತಿದ್ದೇವೆ. ಈ ಹಿಂದಿನ ನಗರಸಭೆ ಅಧಿಕಾರಿಗಳು, ಆ ರಸ್ತೆ ನಗರಸಭೆಗೆ ಸೇರಿದ್ದು ಎಂದು ದಾಖಲೆಗಳನ್ನು ಒದಗಿಸಿದ್ದಾರೆ. ಅಲ್ಲದೇ ಮಠದ ಮುಂದಿನ ರಸ್ತೆಯನ್ನೂ ನಗರಸಭೆಯಿಂದಲೇ ನಿರ್ಮಾಣ ಮಾಡಲಾಗಿದೆ ಎನ್ನುವ ದಾಖಲೆ ನೀಡಿದ್ದಾರೆ. ಆದರೆ ಈಗ ಏಕಾಏಕಿ ಶ್ರೀಮಠದ ಆಡಳಿತ ಮಂಡಳಿ, ಒಟ್ಟು 80 ಎಕರೆ ಜಾಗ ನಮ್ಮದು ಎನ್ನುತ್ತಿದ್ದಾರೆ. ಅದರ ಜೊತೆಗೆ ಅಧಿಕಾರಿಗಳು ಶ್ರೀಮಠದ ಪರವಾಗಿ ಧ್ವನಿ ಎತ್ತಿರುವುದು ಅನುಮಾನಕ್ಕೆ ಕಾರಣವಾಗಿದೆ. ಹೀಗಾಗಿ ಇನ್ನು ಮುಂದೆ ರಥಬೀದಿ ವಿಷಯವಾಗಿ ಜಿಲ್ಲಾಧಿಕಾರಿಗಳು ಮತ್ತು ಪೌರಾಯುಕ್ತರ ವಿರುದ್ಧ ಕಾನೂನು ಹೋರಾಟ ಆರಂಭಿಸಲಾಗುವುದು ಎಂದು ತಿಳಿಸಿದರು.

ಜಾತ್ರೆ ನೆಪದಲ್ಲಿ ಹೊರ ರಾಜ್ಯದವರು, ಅನ್ಯ ಭಾಷಿಕರು, ಮುಸ್ಲಿಂರು ಮಾತ್ರ ವ್ಯಾಪಾರ ನಡೆಸುತ್ತಿದ್ದರೂ ಕನ್ನಡಪರ ಹೋರಾಟಗಾರರು ಶ್ರೀಮಠದ ಪರವಾಗಿ ನಿಂತಿರುವುದು ಹಾಸ್ಯಾಸ್ಪದವಾಗಿದೆ. ಹಿಂದೂ ಕಾರ್ಯಕರ್ತರ ಶ್ರಮದ ಮೇಲೆ ಅಧಿಕಾರ ಅನುಭವಿಸುವ ಬಿಜೆಪಿ ನಾಯಕರೂ ಶ್ರೀಮಠದ ಪರವಾಗಿ ನಿಂತಿದ್ದಾರೆ. ಹೀಗಾಗಿ ನಿಜವಾದ ಸಮಾಜ ಘಾತುಕರು ಯಾರು ಎನ್ನುವುದನ್ನು ಸಮಾಜವೇ ನಿರ್ಧರಿಸಲಿದೆ ಎಂದು ರಾಜು ಖಾನಪ್ಪನವರ ಹೇಳಿದರು.

ಶ್ರೀಮಠದ ಮುಂದಿನ ರಥಬೀದಿ ಮಠದ ಆಸ್ತಿಯಾಗಿದ್ದರೆ ಅಲ್ಲಿ ಪ್ರತಿನಿತ್ಯ 15–20 ಜನ ಪೌರ ಕಾರ್ಮಿಕರು ಅಲ್ಲಿ ಕಸ ಗುಡಿಸುವುದು ಯಾವ ಕಾರಣಕ್ಕೆ ಎಂದು ಪ್ರಶ್ನಿಸಿದ ಅವರು, ಅಲ್ಲಿ ಟ್ರಾಫಿಕ್ ಪೊಲೀಸರ ನಿಯೋಜನೆ ಮಾಡಿದ್ದೇಕೆ, ಭದ್ರತೆ ಒದಗಿಸಲು ಶ್ರೀಮಠದವರು ಪೊಲೀಸರಿಗೆ ಶುಲ್ಕ ಭರಿಸಿದ್ದಾರೆಯೇ ಎನ್ನುವುದನ್ನು ಸ್ಪಷ್ಟಪಡಿಸಬೇಕು ಎಂದು ಸವಾಲು ಹಾಕಿದರು. ಶ್ರೀರಾಮಸೇನೆ ಜಿಲ್ಲಾಧ್ಯಕ್ಷ ಸೋಮು ಗುಡಿ, ಕುಮಾರ ನಡಗೇರಿ, ಮೌನೇಶ ದಾಸರ, ವಿಶ್ವನಾಥ ಶೀರಿ, ಮಹೇಶ ರೋಖಡೆ, ಮಂಜು ಬಂಡಿವಡ್ಡರ, ಈರಣ್ಣ ಹೆಬಸೂರ, ಭರತ್ ಲದ್ದಿ, ವೆಂಕಟೇಶ ದೊಡ್ಡಮನಿ, ಸತೀಶ ಕುಂಬಾರ ಇತರರು ಉಪಸ್ಥಿತರಿದ್ದರು.

### ಸರ್ಕಾರದ ವಿಮೆಗಳನ್ನು ಮಾಡಿಸಿ ಉಪಯೋಗ ಪಡೆದುಕೊಳ್ಳಲು ಚಂದ್ರಶೇಖರ ಕಂದಕೂರ ಕರೆ

# ನರೇಗಾ ಕಾಮಗಾರಿ ಸ್ಥಳದಲ್ಲಿ ವಿಮೆ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಯಾವಗಲ್ ಗ್ರಾಮದಲ್ಲಿ ನರೇಗಾ ಕೂಲಿ ಕಾರ್ಮಿಕರು ಬೇಸಿಗೆಯಲ್ಲಿ ಸಿಗುವ ಉದ್ಯೋಗವನ್ನು ಬಳಸಿಕೊಂಡು ತಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು. ಜೊತೆಗೆ ಎಲ್ಲರೂ ಕಐಎಎಜ ಕಐಖಃಜ ವಿಮೆಗಳನ್ನು ಮಾಡಿಸಿ ವಿಮೆಗಳಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ತಾಲೂಕು ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.



ಗ್ರಾಮದಲ್ಲಿ ನಡೆಯುತ್ತಿರುವ ನರೇಗಾ ಸಾಮೂಹಿಕ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಉದ್ಯೋಗವನ್ನು ಅರಸಿ ಬೇರೆ ಕಡೆ ವಲಸೆ ಹೋಗದೆ ನಮ್ಮ ಗ್ರಾಮದಲ್ಲೇ ಸಿಗುವ ನರೇಗಾ ಕೂಲಿ ಕೆಲಸಗಳನ್ನು ಮಾಡಿ ಜೀವನವನ್ನು ಸಾಗಿಸಿ ಗುಳೇ ಹೋಗುವುದನ್ನು ತಪ್ಪಿಸಿ ಎಂದರಲ್ಲದೆ, ತಾಲೂಕಿನಲ್ಲಿ ಮಹಿಳಾ ಸಬಲಿಕರಣ ಮಾಡುವ ನಿಟ್ಟಿನಲ್ಲಿ ಸ್ತ್ರೀ ಚೇತನ ಅಭಿಯಾನವನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷರಾದ ಶಂಷಾದ್ ಬೇಗಮ್ ಬಾಬಾನಗರ ಮಾತನಾಡಿ, ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆ (ಕಐಖಃಜ) ಕೂಡಾ ಭಾರತ ಸರ್ಕಾರದ ಅಪಘಾತ ವಿಮಾ ಯೋಜನೆಯಾಗಿದ್ದು, ಅಪಘಾತದಿಂದ ಉಂಟಾಗುವ ಮರಣ ಅಥವಾ ಅಂಗವೈಕಲ್ಯಕ್ಕೆ ಆರ್ಥಿಕ ರಕ್ಷಣೆ ನೀಡುತ್ತದೆ. ಇದಕ್ಕೆ ವಾರ್ಷಿಕವಾಗಿ ಕೇವಲ 20 ರೂ (ಆನ್‌ಲೈನ್‌ನಲ್ಲಿ 19 ರೂ) ಪ್ರೀಮಿಯಂನೊಂದಿಗೆ, ಇದು ಎಲ್ಲಾ ಆದಾಯ ವರ್ಗದ ಜನರಿಗೆ ಅನೂಕಲವಾಗಿದೆ. ಅಪಘಾತದಿಂದ ಸಾವು ಸಂಭವಿಸಿದರೆ, ನಾಮಿನಿಗೆ 2 ಲಕ್ಷ ರೂ ವಿಮಾ ಮೊತ್ತವನ್ನು ನೀಡಲಾಗುತ್ತದೆ. ಇದು ಕುಟುಂಬಕ್ಕೆ ಆರ್ಥಿಕ ಸ್ಥಿರತೆಯನ್ನು ಒದಗಿಸುತ್ತದೆ. ಮುಖ್ಯವಾಗಿ ಇದು ಕಡಿಮೆ ಆದಾಯದ ಗುಂಪುಗಳು, ಅಸಂಘಟಿತ ವಲಯದ ಕಾರ್ಮಿಕರು ಮತ್ತು ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ, ಆಪತ್ತು–ಪೀಡಿತ ಪ್ರದೇಶಗಳಲ್ಲಿ ವಾಸಿಸುವವರು ಅಥವಾ ಅಪಾಯಕಾರಿ ಉದ್ಯೋಗಗಳಲ್ಲಿ ಕೆಲಸ ಮಾಡುವವರಿಗೆ ಹೆಚ್ಚು ಅನುಕೂಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಉಪಾಧ್ಯಕ್ಷರಾದ ಶಿವಾನಂದ ಮೀಶಿ, ಸದಸ್ಯರಾದ ಹೆಚ್.ಎಂ. ಪಾಟೀಲ್, ಸಂತೋಷ್ ಕಮತಿ, ರೇಣುಕಾ ಕುರಿ, ಲಲಿತಾ ರೋಣದ, ಕೆಂಚಪ್ಪ ಮಾದರ್ ಸೇರಿದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಬೋದ್ಲೆಖಾನ, ಸಂಜೀವಿನಿ ಕಾರ್ಯಕ್ರಮ ವ್ಯವಸ್ಥಾಪಕರಾದ ಗುರುಬಸಪ್ಪ ವೀರಾಪುರ್, ಸಂಜೀವಿನಿ ಸಿಬ್ಬಂದಿಗಳು ಹಾಗೂ ಕೂಲಿಕಾರರು ಭಾಗವಹಿಸಿದ್ದರು.

ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಯು (PMJJBY) ಭಾರತ ಸರ್ಕಾರದ ಜೀವ ವಿಮಾ ಯೋಜನೆಯಾಗಿದ್ದು, ಕಡಿಮೆ ಆದಾಯ ವರ್ಗಗಳಿಗೆ ಕೈಗೆಟಕುವ ಪ್ರೀಮಿಯಂನಲ್ಲಿ ಜೀವ ವಿಮೆ ಒದಗಿಸುತ್ತದೆ. ಯಾವುದೇ ಕಾರಣದಿಂದ (ನೈಸರ್ಗಿಕ/ಅನ್ನೈಸರ್ಗಿಕ) ವಿಮಾದಾರ ಸಾವಿಗೀಡಾದರೆ, ನಾಮಿನಿಗೆ 2 ಲಕ್ಷ ರೂ ವಿಮಾ ಮೊತ್ತ ಸಿಗಲಿದೆ. ಇದಕ್ಕಾಗಿ ವಾರ್ಷಿಕವಾಗಿ 436 ರೂಗಳು ನೇರವಾಗಿ ನಿಮ್ಮ ಖಾತೆಯಿಂದ ಡೆಬಿಟ್ ಆಗುತ್ತದೆ. ಈ ಹಿನ್ನೆಲೆಯಲ್ಲಿ 18–50 ವರ್ಷದವರು, ಉಳಿತಾಯ ಖಾತೆ ಹೊಂದಿದವರು ಈ ವಿಮೆಯನ್ನು ಮಾಡಿಸಿಕೊಳ್ಳಬೇಕೆಂದು ಚಂದ್ರಶೇಖರ ಬಿ.ಕಂದಕೂರ ಮನವಿ ಮಾಡಿದರು.

## ಭಾರೀ ಮಳೆಗೆ ಹಳ್ಳದಲ್ಲಿ ಕೊಚ್ಚಿ ಹೋಗಿದ್ದ ವ್ಯಕ್ತಿಯ ಮೃತದೇಹ ಪತ್ತೆ..!





■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಂಗಳವಾರ ಸುರಿದ ಭಾರೀ ಮಳೆಗೆ ಹಳ್ಳದಲ್ಲಿ ಬೈಕ್ ಸಮೇತ ಕೊಚ್ಚಿ ಹೋಗಿದ್ದ ವ್ಯಕ್ತಿಯ ಮೃತದೇಹ ಕೊನೆಗೂ ಪತ್ತೆಯಾಗಿದೆ. ಹಿರೇಕೊಪ್ಪ ಗ್ರಾಮದ ನಿವಾಸಿ 39 ವರ್ಷದ ಶರಣಪ್ಪ ಹಡಗಲಿ ಸಾವನ್ನಪ್ಪಿರುವ ವ್ಯಕ್ತಿ. ಇದೀಗ ಪೊಲೀಸರು ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಗದಗ ಜಿಲ್ಲೆಯ ಹಲವೆಡೆ ಮಂಗಳವಾರ ಭಾರಿ ಮಳೆ ಸುರಿದಿದ್ದು, ಚರಂಡಿಗಳೆಲ್ಲಾ ತುಂಬಿ ಹರಿಯುತ್ತಿತ್ತು. ಈ ವೇಳೆ ಜಾಸ್ತಿ ನೀರು ಇದ್ದ ಕಾರಣ ಹಳ್ಳ ನೋಡದೇ ಬೈಕ್ ಚಲಾಯಿಸಿದ ಸವಾರ ನೀರಲ್ಲಿ ಕೊಚ್ಚಿ ಹೋಗಿದ್ದ. ಗದಗ ತಾಲೂಕಿನ ಬೆನಕೊಪ್ಪ ಗ್ರಾಮದ ಹಳ್ಳದಲ್ಲಿ ಈ ಘಟನೆ ಜರುಗಿತ್ತು. ಪತ್ನಿಯ ತವರು ಮನೆ ಬೆನಕೊಪ್ಪಕ್ಕೆ ಶರಣಪ್ಪ ಹಡಗಲಿ ಅವರು ಹೊರಟ್ಟಿದ್ದ ವೇಳೆ ಈ ದುರಂತ ಸಂಭವಿಸಿದೆ. ಘಟನೆಯ ಮಾಹಿತಿ ಆಧರಿಸಿ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಕೊನೆಗೂ ಮೃತದೇಹ ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ಇನ್ನೂ ಮುತ್ತಪ್ಪನನ್ನು ಕಳೆದುಕೊಂಡ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಘಟನೆ ಸಂಬಂಧ ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಪ್ಪಣ್ಣ ಹಂಜೆಯವರಿಗೆ 'ಸಾಹಿತ್ಯ ಸಿರಿ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಇತಿಹಾಸ, ಧರ್ಮ, ಸಾಹಿತ್ಯ, ವಾಸ್ತುಕಲೆ, ಶಿಲ್ಪಕಲೆ, ಶಾಸನ, ಸಂಸ್ಕೃತಿ ಮುಂತಾದ ಕ್ಷೇತ್ರಗಳಲ್ಲಿ ಸಂಶೋಧನೆ, ಅಧ್ಯಯನ, ಪ್ರಕಟಣೆಯಲ್ಲಿ ತೊಡಗಿರುವ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕರಾದ ಡಾ. ಅಪ್ಪಣ್ಣ ಹಂಜೆ ರಾಜ್ಯಮಟ್ಟದ 'ಸಾಹಿತ್ಯ ಸಿರಿ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಚಿಕ್ಕಮಗಳೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಕಳಸ ಶ್ರೀ 1008 ಭಗವಾನ ಚಂದ್ರನಾಥಸ್ವಾಮಿ ಬಸದಿ ಜೀರ್ಣೋದ್ಧಾರ ಸಮಿತಿ ಸಂಯುಕ್ತಾಶ್ರಯದಲ್ಲಿ ಮೇ 18ರಂದು ಕಳಸದ ಕೆಳಂಗಡಿಯಲ್ಲಿರುವ ಶ್ರೀ ಚಂದ್ರನಾಥಸ್ವಾಮಿ ಬಸದಿಯ ಪಂಚಕಲ್ಯಾಣ



ಹಾಗೂ ನೂತನ ಬಸದಿಯ ಲೋಕಾರ್ಪಣೆ ಮತ್ತು ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ನಡೆಯಲಿರುವ ರಾಜ್ಯ ಪ್ರಪ್ರಥಮ ಜೈನ ಸಾಹಿತ್ಯ ಸಮ್ಮೇಳನದಲ್ಲಿ ಡಾ. ಅಪ್ಪಣ್ಣ ಹಂಜೆ ಅವರಿಗೆ ಈ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಚಿಕ್ಕಮಗಳೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸೂರಿ ಶ್ರೀನಿವಾಸ ತಿಳಿಸಿದ್ದಾರೆ.

ಪ್ರಶಸ್ತಿಗೆ ಭಾಜನರಾದ ಡಾ. ಅಪ್ಪಣ್ಣ ಹಂಜೆ ಅವರಿಗೆ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರು, ಸದಸ್ಯರು, ಪ್ರಾಚಾರ್ಯರು, ಬೋಧಕ–ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಗದಗ ಜಿಲ್ಲೆಯ ಸಾಹಿತಿಗಳು, ಸಂಶೋಧಕರು, ಗದಗ ಜಿಲ್ಲಾ ದಿಗಂಬರ ಜೈನ ಸಂಘದ ಪದಾಧಿಕಾರಿಗಳು ಅಭಿನಂದಿಸಿ ಶುಭ ಹಾರೈಸಿದ್ದಾರೆ.

# ಸ್ವಯಂ ಸೇವಾ ಸಂಸ್ಥೆಗಳ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿಂಚನ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆ ಹಾಗೂ ಶ್ರೀ ಅಜ್ಜೇಶ್ವರ ಸೇವಾ ಸಮಿತಿ, ಸವಡಿ–ರೋಣ ಸಂಘಗಳು ಯೋಜನೆ ಅನುಷ್ಠಾನದಲ್ಲಿ ತೊಡಗಿಕೊಂಡು ಸ್ವಯಂ ಸೇವಾ ಸಂಸ್ಥೆಗಳು ತಾವು ಒದಗಿಸಿದ ಸೇವೆಗೆ ಅರ್ಹದಾಯಕ ಮೊತ್ತಕ್ಕಿಂತ ಹೆಚ್ಚುವರಿಯಾಗಿ ಅನುದಾನವನ್ನು ಪಡೆದುಕೊಂಡಿರುವುದು ಕಂಡುಬಂದಿದೆ.

ಈ ವಿಷಯವು ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಮುಂದೆ ಚರ್ಚೆಗೆ ಬಂದಿದ್ದು, ಸದರಿ ಸಂಸ್ಥೆಗಳ ಮಾನ್ಯತೆಯನ್ನು ರದ್ದುಗೊಳಿಸಲು ಕ್ರಮ ವಹಿಸಲು ಸೂಚಿಸಿದ ಹಿನ್ನೆಲೆಯಲ್ಲಿ ಸಂಘದ ನೋಂದಣಿಯನ್ನು ಏಕೆ ರದ್ದುಪಡಿಸಬಾರದು ಎಂಬುದಕ್ಕೆ ಈಗಾಗಲೇ ನೋಟೀಸ್ ನೀಡಲಾಗಿತ್ತು.

ನೋಟೀಸ್ ತಲುಪಿದರೂ ಸಹಿತ ವಿಚಾರಣೆಗೆ ಗೈರು ಹಾಜರಾಗಿದ್ದು ಮತ್ತು ಸಮಜಾಯಿಷಿ ಉತ್ತರವನ್ನು ನೀಡಿರುವುದಿಲ್ಲ. ಮೇ 21ರೊಳಗೆ ಉತ್ತರವನ್ನು ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಆಡಳಿತ ಭವನ, ಕೊಠಡಿ ಸಂಖ್ಯೆ–125, ಗದಗ ಇಲ್ಲಿ ಸಲ್ಲಿಸಲು ಜಿಲ್ಲಾ ಸಂಘಗಳ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂಡರಗಿ ಜೆ.ಟಿ ಸಿಬಿಎಸ್‌ಇ ಶಾಲೆಯ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಜಗದ್ಗುರು ತೋಂಟ–ದಾರ್ಯ ವಿದ್ಯಾಪೀಠದ ಮುಂಡರಗಿಯ ಜೆ.ಟಿ ಸಿ.ಬಿ.ಎಸ್.ಇ ಶಾಲೆಯ 10ನೇ ತರಗತಿಯ ಫಲಿತಾಂಶ ಶೇ.98ರಷ್ಟಾಗಿದೆ. ಪರೀಕ್ಷೆಗೆ ಹಾಜರಾದ 80 ವಿದ್ಯಾರ್ಥಿಗಳಲ್ಲಿ 78 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದರಲ್ಲಿ 13 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 41 ವಿದ್ಯಾರ್ಥಿಗಳು ಪ್ರಥಮ ದರ್ಜೆ, 17 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಹಾಗೂ 7 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಶ್ರೀರಕ್ಷಾ ಸಾಯಿಪ್ರಸನ್ನ ಅಳವಂಡಿ ಶೇ. 91.2 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ನಿಖಿಲ ಹೇಮಣ್ಣ ಮೇಟಿ ಶೇ. 90.04 ಅಂಕಗಳನ್ನು ಪಡೆದು ದ್ವಿತೀಯ, ಪ್ರೀತಂ ಸಂತೋಷ ಹವಳೆ ಶೇ.90 ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಸಮರ್ಥ ರಾಮೇನಹಳ್ಳಿ, ನಂದಿನಿ ಶಿವಾನಂದ ಹಾತಲಗೇರಿ, ಮಾಜಾ ರಶಿದಹಮ್ಮದ ಮುಲ್ಲಾ, ರವಿಕುಮಾರ ಜಂಗನವಾಡಿ, ಅರ್ಚನಾ ಕಾಗನೂರ, ತುಳಸಿ ಅಳವಂಡಿ, ಸನಾ ಮುಶ್ತಾಕ ಸವಣೂರು ಇವರು ಡಿಸ್ಟಿಂಕ್ಷನ್‌ನಲ್ಲಿ ಪಾಸಾಗಿದ್ದಾರೆ.

ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳನ್ನು ಶಾಲೆಯ ಪ್ರಾಚಾರ್ಯರಾದ ಶರಣು ಬುಗಟಿ, ಆಡಳಿತ ಮಂಡಳಿ ಅಧ್ಯಕ್ಷರಾದ ಪೂಜ್ಯ ಡಾ. ತೋಂಟದ ಸಿದ್ಧರಾಮ ಶ್ರೀಗಳು, ಮುಂಡರಗಿಯ ನಿಜಗುಣ ಶ್ರೀಗಳು ಮತ್ತು ಸ್ಥಳೀಯ ಅಧ್ಯಕ್ಷರಾದ ಎಸ್. ಎಸ್. ಪಾಟೀಲ, ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಅಭಿನಂದನೆ ಸಲ್ಲಿಸಿದ್ದಾರೆ.


ಕರ್ನಾಟಕ ಸರಕಾರ

**ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ**

**ಶಾಲಾ ಶಿಕ್ಷಣ ಇಲಾಖೆ, ಮುಂಡರಗಿ ಜಿ : ಗದಗ**

ಪ.ಸಂ:ಇ5/ವಾಹನ ಬಾಡಿಗೆ/ಆ.ಅ.ಕು/2024–25 ದಿನಾಂಕ : 13–05–2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಶಾಲಾ ಶಿಕ್ಷಣ ಇಲಾಖೆ ಮುಂಡರಗಿ ಈ ಕಛೇರಿಯ ದೈನಂದಿನ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂದರ್ಶನ, ತಪಾಸಣೆ, ಪರೀಕ್ಷಾ ಕಾರ್ಯ ಪ್ರವಾಹ ಪೀಡಿತ ಸ್ಥಳಗಳಿಗೆ ಭೇಟಿ, ಮೇಲಾಧಿಕಾರಿಗಳ ಸಭೆಗಳಿಗೆ ಹಾಗೂ ಇನ್ನಿತರ ಕಾರ್ಯಗಳಿಗೆ ವಾಹನವು ಬಹಳ ಅವಶ್ಯಕತೆ ಇರುವದರಿಂದ ಮಾಸಿಕ ಬಾಡಿಗೆ ಆಧಾರದ ಮೇಲೆ ವಾಹನವನ್ನು ಹೊರಗುತ್ತಿಗೆ ಮೂಲಕ ದಿನಾಂಕ : **01–06–2025** ರಿಂದ ದಿನಾಂಕ : **31–03–2026** ರವರೆಗೆ ಒದಗಿಸಲು ಅರ್ಹವಾಹನ ಮಾಲೀಕರು ಕೆ.ಟಿ.ಟಿ.ಪಿ ನಿಯಮಾನುಸಾರ ಅರ್ಜಿ ಸಲ್ಲಿಸಬಹುದು ಅರ್ಜಿದಾರರು ಮುಚ್ಚಿದ ಲಕೋಟೆಯಲ್ಲಿ ಮೊಹರು ಮಾಡಿ ಅರ್ಜಿ ಸಲ್ಲಿಸಬೇಕು.

ವಿವರಗಳು : ಬಾಡಿಗೆ ವಾಹನ 2021–2023ರ ಕಾರ್ ಮಾದರಿ (SWIFT DZIRE), ಅಂದಾಜು ಮೊತ್ತ ರೂ. **3,00,000/–**, ಇ.ಎಮ್.ಡಿ ಮೊತ್ತ ರೂ. **6,000/–**, ಅರ್ಜಿ ಶುಲ್ಕ ರೂ. **500/–**

- ಆಸಕ್ತ ಅರ್ಜಿದಾರರು ನಿಗದಿಪಡಿಸಿದ ಅರ್ಜಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಶಾಲಾ ಶಿಕ್ಷಣ ಇಲಾಖೆ ಮುಂಡರಗಿ ಇವರಲ್ಲಿ ಪಡೆದುಕೊಳ್ಳಬಹುದಾಗಿದೆ. ಟೆಂಡರ್ ಫಾರ್ಮ ನಿಗದಿಪಡಿಸಿದ ಇ.ಎಮ್.ಡಿ ಮೊತ್ತವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹೆಸರಿನಲ್ಲಿ ಡಿ.ಡಿ ಪಡೆಯುವದು. ಹಾಗೂ ಅರ್ಜಿ ಶುಲ್ಕವನ್ನು ನಗದು ರೂಪದಲ್ಲಿ ನೀಡುವದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ **08371–262207** ಗೆ ಸಂಪರ್ಕಿಸಬಹುದಾಗಿದೆ.
- ಅರ್ಜಿ ಪಡೆಯುವ ಹಾಗೂ ಮರಳಿ ಸಲ್ಲಿಸುವ ದಿನಾಂಕ : **22–05–2025** ಸಮಯ ಸಾಯಂಕಾಲ 5:30 ರೊಳಗೆ.
- ಅರ್ಜಿ ಟೆಂಡರ್ ಪೆಟ್ಟಿಗೆ ತೆರೆಯುವ ದಿನಾಂಕ : **23–05–2025** ಸಮಯ ಮಧ್ಯಾಹ್ನ 12:30 ಗಂಟೆ.

**ಸಹಿ/– ಕ್ಷೇತ್ರ ಶಿಕ್ಷಣಾಧಿಕಾರಿಗಳು,**
**ಶಾ.ಶಿ.ಇ ಮುಂಡರಗಿ**


ವಾಸಾಸಂಇ/ಗದಗ/ಕೆಎಸ್‌ಎಂಸಿಎ/58/2025–26


### ಶಾಶ್ವತ ಚಿತ್ರಾತ್ಮಕ ಮುದ್ರೆ, ಚಿತ್ರ ಅಂಚೆ ಪತ್ರವನ್ನು ಬಿಡುಗಡೆಗೊಳಿಸಿದ ಎಸ್. ರಾಜೇಂದ್ರಕುಮಾರ್

# ಲಕ್ಕುಂಡಿ ಜಾಗತಿಕ ಮಟ್ಟದಲ್ಲಿ ಹೆಸರಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಸ್ಥಳ, ಪರಂಪರೆಯ ಪರಿಚಯಕ್ಕೆ ಶಾಶ್ವತ ಚಿತ್ರಾತ್ಮಕ ಮುದ್ರೆ ಹಾಗೂ ಚಿತ್ರ ಅಂಚೆ ಪತ್ರ ಲೋಕಾರ್ಪಣೆ ನಾಡಿನ ಜನರಿಗೆ ತಲುಪಿಸಿಲು ಸಹಕಾರಿಯಾಗಿದೆ ಎಂದು ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಎಸ್. ರಾಜೇಂದ್ರಕುಮಾರ್ ಹೇಳಿದರು.




ತಾಲೂಕಿನ ಲಕ್ಕುಂಡಿ ಗದಗ ವಿಭಾಗೀಯ ಅಂಚೆ ಕಚೇರಿ ಹಾಗೂ ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಅನ್ನದಾನೀಶ್ವರ ಮಠದಲ್ಲಿ ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಬ್ರಹ್ಮ ಜಿನಾಲಯ ದೇವಸ್ಥಾನದ ಶಾಶ್ವತ ಚಿತ್ರಾತ್ಮಕ ಮುದ್ರೆ ಹಾಗೂ ಚಿತ್ರ ಅಂಚೆ ಪತ್ರವನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಲಕ್ಕುಂಡಿಯ ದೇವಸ್ಥಾನದ ಕಲ್ಲಿನ ಕರಕುಶಲ ವಾಸ್ತುಶಿಲ್ಪ ಜಾಗತಿಕ ಮಟ್ಟದಲ್ಲಿ ಹೆಸರು, ಪ್ರಖ್ಯಾತಿ ಪಡೆದಿದೆ. ಇಂತಹ ಐತಿಹಾಸಿಕ ಹಿನ್ನೆಲೆ ಮತ್ತು ಆ ಕಾಲಘಟ್ಟದ ಸಂಶೋಧನೆಗಳ ಬಗೆಗೆ ಯುವ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ. ಈ ನಾಡಿನ ಸಂಸ್ಕೃತಿ, ಐತಿಹಾಸಿಕ ಕೊಡುಗೆ, ವೈವಿಧ್ಯಮಯ ಪರಿಸರ ಮತ್ತು ಪರಂಪರೆಯ ಮಾಹಿತಿಯನ್ನು ಜನಸಾಮಾನ್ಯರಿಗೆ ತಲುಪಿಸಲು ಅಂಚೆ ಇಲಾಖೆ ಬ್ರಹ್ಮ ಜಿನಾಲಯ ದೇವಸ್ಥಾನದ ಶಾಶ್ವತ ಚಿತ್ರಾತ್ಮಕ ಮುದ್ರೆ ಹಾಗೂ ಚಿತ್ರ ಅಂಚೆ ಪತ್ರವನ್ನು ಬಿಡುಗಡೆ ಮಾಡಲಾಗಿದೆ ಎಂದರು.

ಉತ್ತರ ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಸುಶೀಲ್ ಕುಮಾರ ಮಾತನಾಡಿ, ಈಗಾಗಲೇ ಭಾರತೀಯ ಅಂಚೆ ಇಲಾಖೆ ಹೊಸ ತಂತ್ರಜ್ಞಾನದ ಜೊತೆಗೆ ವಿವಿಧ ಸೇವೆಗಳು ಸಮಾಜ ಕಡೆಯ ವ್ಯಕ್ತಿಗೂ ಲಭಿಸಲು ವಿನೂತನ ಯೋಜನೆಯ ಅನುಷ್ಠಾನಕ್ಕೆ ಮುಂದಾಗಿದೆ. ಹಾಗಾಗಿ ಜನರು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಲಕ್ಕುಂಡಿಯ ವಾಸ್ತುಶಿಲ್ಪ ಜಾಗತಿಕ ಮಟ್ಟದಲ್ಲಿ ಹೆಸರು ಪಡೆದುಕೊಂಡಿದೆ. ನಾಡಿನ ಪ್ರಖ್ಯಾತ ಪ್ರವಾಸಿ ತಾಣಗಳನ್ನು ಪರಿಚಯಿಸಲು ಮತ್ತು ಗ್ರಾಹಕರಿಗೆ ತಮ್ಮ ನೆಚ್ಚಿನ ಚಿತ್ರ ಕಳುಹಿಸಲು ಉಪಯೋಗಿಸಬಹುದಾಗಿದೆ. ಇತಂಹ ಮಹತ್ವದ ಅಂಚೆ ಚೀಟಿಯಿಂದಾಗಿ ದೇಶದ ಎಲ್ಲೆಡೆ ನಮ್ಮ ನಾಡಿನ ಹೆಮ್ಮೆಯ ಸಾಧಕರ, ಐತಿಹಾಸಿಕ ಮಹತ್ವ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ, ಪ್ರಸಿದ್ಧಿಗಳನ್ನು ಪ್ರಚುರಪಡಿಸಲು ಸಾಧ್ಯವಾಗಲಿದೆ ಎಂದು ಕರ್ನಲ್ ಸುಶೀಲ್ ಕುಮಾರ ಹೇಳಿದರು.

ದಾನಚಿಂತಾಮಣಿ ಅತ್ತಿಮಬ್ಬೆ ಹಾಗೂ ಲಕ್ಕುಂಡಿಯ ಐತಿಹಾಸಿಕ ಹಿನ್ನೆಲೆ ಕುರಿತು ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಜಯದೇವ ಕಡಗಿ ಪ್ರಾಸ್ತವಿಕವಾಗಿ ಮಾತನಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆಂಚಪ್ಪ ಪೂಜಾರ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಅಂಚೆ ಸಂಗ್ರಾಹಕರ ಜೈನ ರಾಷ್ಟ್ರೀಯ ಉಪಾಧ್ಯಕ್ಷ ಮಹಾವೀರ ಕುಂದೂರು, ಲಕ್ಕುಂಡಿ ಉಪ ಅಂಚೆ ಪಾಲಕರಾದ ರವಿ ವರ್ಣೇಕರ, ಅನಿತಾ ಕುರಿ, ಬಸವರಾಜ ಸೇಡದ, ವಿವಿಧ ಜಿಲ್ಲೆಯ ಅಂಚೆ ಸಂಗ್ರಹಾಕರು ಪಾಲ್ಗೊಂಡಿದ್ದರು. ಅಂಚೆ ಇಲಾಖೆಯ ಜಿಲ್ಲಾ ತರಬೇತಿದಾರ ನಿಂಗಪ್ಪ ಹೂಗಾರ ಪ್ರಾರ್ಥಿಸಿ, ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka